ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 Issue: 267 ₹ ಬೆಲೆ: 4 Sunday, 17, December,2023 newsbelagavi@gmail.com 9900332089 Regn,No:G-2/PMG/KA/NK/BM/139/2021-23

ಸಂಸತ್ ಭದ್ರತೆ ಉಲ್ಲಂಘನೆ ಹಿಂದೆ ನಿರುದ್ಯೋಗ, ಬೆಲೆ ಏರಿಕೆ ಕಾರಣ

ನವದೆಹಲಿ: ಸಂಸತ್ ಭವನದ ಭದ್ರತೆ ಉಲ್ಲಂಘನೆ ಘಟನೆಗೆ ನಿರುದ್ಯೋಗ, ಬೆಲೆ ಏರಿಕೆ ಕಾರಣ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಹೇಳಿದ್ದಾರೆ. ಚುನಾವಣಾ ತಯಾರಿ ಸಭೆಯ ಭಾಗವಾಗಿ ವರದಿಗಾರರೊಂದಿಗೆ ಮಾತನಾಡಿದ ರಾಹುಲ್ ಗಾಂಧಿ, ಯುವಕರಿಗೆ ಉದ್ಯೋಗ ಸಿಗದ ಕಾರಣ ಸಂಸತ್ ಭದ್ರತೆ ಉಲ್ಲಂಘನೆ ಘಟನೆ ನಡೆದಿದೆ. ಪ್ರಧಾನಿ ಮೋದಿ ನೀತಿಗಳಿಂದ ಯುವಕರಿಗೆ ಉದ್ಯೋಗಗಳು ಸಿಗುತ್ತಿಲ್ಲ ಎಂದು ರಾಹುಲ್ ಗಾಂಧಿ ಆರೋಪಿಸಿದ್ದಾರೆ. ದೇಶದೆಲ್ಲೆಡೆ ಕುದಿಯುತ್ತಿರುವ ನಿರುದ್ಯೋಗ ಸಮಸ್ಯೆ ದೇಶದ ಬಹುದೊಡ್ಡ ಸಮಸ್ಯೆಯಾಗಿದೆ. 2001 ರ ಸಂಸತ್ತಿನಲ್ಲಿ ನಡೆದ ಭಯೋತ್ಪಾದಕ ದಾಳಿಯ ವಾರ್ಷಿಕ ದಿನದಂದು ನಡೆದ ಪ್ರಮುಖ ಭದ್ರತಾ ಉಲ್ಲಂಘನೆಯಲ್ಲಿ, ಶೂನ್ಯ ವೇಳೆಯಲ್ಲಿ ಇಬ್ಬರು ವ್ಯಕ್ತಿಗಳು ಸಾರ್ವಜನಿಕ ಗ್ಯಾಲರಿಯಿಂದ ಲೋಕಸಭೆಯ ಚೇಂಬರ್‌ಗೆ ಜಿಗಿದರು, ಕಲರ್ ಸ್ಮೋಕ್ ಬಿಡುಗಡೆ ಮಾಡಿ ಘೋಷಣೆಗಳನ್ನು ಕೂಗಿದ್ದರು.ಹಚ್ಚಿಕೊಳ್ಳಲು ಯೋಜನೆ ರೂಪಿಸಿದ್ದ ಆರೋಪಿ!

ಅದೇ ಸಮಯದಲ್ಲಿ, ಇತರ ಇಬ್ಬರು ಅಮೋಲ್ ಶಿಂಧೆ ಮತ್ತು ನೀಲಂ ದೇವಿಸಂಸತ್ತಿನ ಆವರಣದ ಹೊರಗೆ "ತನಾಶಾಹಿ ನಹೀ ಚಲೇಗಿ" ಎಂದು ಕೂಗುತ್ತಾ ಡಬ್ಬಿಗಳಿಂದ ಬಣ್ಣದ ಹೊಗೆಯನ್ನು ಬಿಡುಗಡೆ ಮಾಡಿದರು. ಭದ್ರತಾ ಲೋಪದ ಬಗ್ಗೆ ಪ್ರತಿಪಕ್ಷಗಳು ಸರ್ಕಾರದಿಂದ ಉತ್ತರವನ್ನು ಕೇಳುತ್ತಿವೆ ಮತ್ತು ಈ ವಿಷಯದ ಬಗ್ಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಸಂಸತ್ತಿನಲ್ಲಿ ಹೇಳಿಕೆ ನೀಡುವಂತೆ ವಿಪಕ್ಷಗಳಿ ಒತ್ತಾಯಿಸಿವೆ.

ರತನ್ ಟಾಟಾಗೆ ಬೆದರಿಕೆ ಕರೆ, ಮುಂಬೈ ಪೊಲೀಸರ ಹೈ ಅಲರ್ಟ್



ಮುಂಬೈ: ಹಿರಿಯ ಕೈಗಾರಿಕೋದ್ಯಮಿ ಟಾಟಾ ಸನ್ಸ್‌ನ ಮಾಜಿ ಅಧ್ಯಕ್ಷ ರತನ್ ಟಾಟಾ ಅವರಿಗೆ ಬೆದರಿಕೆ ಕರೆ ಬಂದಿದ್ದು, 'ಸೈರಸ್ ಮಿಸ್ತ್ರಿ ಗೆ ಬಂದ ಸ್ಥಿತಿಯೇ ಬರಲಿದೆ ಎಂದು ಎಚ್ಚರಿಸಲಾಗಿದೆ. ನೇರವಾಗಿ ಪೊಲೀಸರಿಗೇ ಕರೆ ಮಾಡಿರುವ ಆರೋಪಿ ರತನ್ ಟಾಟಾ ಅವರಿಗೆ ಭದ್ರತೆ ಹೆಚ್ಚಿಸದಿದ್ದರೆ 'ಸೈರಸ್ ಮಿಸ್ತ್ರಿ ಗೆ ಬಂದ ಸ್ಥಿತಿಯೇ ಬರಲಿದೆ ಎಂದು ಎಚ್ಚರಿಸಿದ್ದಾರೆ. ಆರೋಪಿ ಪೊಲೀಸರಿಗೆ ಕರೆ ಮಾಡಿ ರತನ್ ಟಾಟಾ ಅವರಿಗೆ ಭದ್ರತೆ ಹೆಚ್ಚಿಸದಿದ್ದರೆ ಟಾಟಾ ಸನ್ಸ್ ಮಾಜಿ ಅಧ್ಯಕ್ಷ ಸೈರಸ್ ಮಿಸ್ತ್ರಿ ಅವರಂತೆ ಪ್ರಾಣ ಕಳೆದುಕೊಳ್ಳಲಿದ್ದಾರೆ ಎಂದು ಎಚ್ಚರಿಸಿದ್ದಾನೆ. ಪ್ರಸಿದ್ಧ ಕೈಗಾರಿಕೋದ್ಯಮಿಯೂ ಆಗಿದ್ದ ಮಿಸ್ತ್ರಿ ಅವರು 2022ರಲ್ಲಿ ಕಾರು ಅಪಘಾತದಲ್ಲಿ ನಿಧನರಾಗಿದ್ದಾರೆ.

ಪೊಲೀಸರು ಹೈ ಅಲರ್ಟ್, ಸುಳಿವು ಲಭ್ಯ ಕರೆ ಸ್ವೀಕರಿಸಿದ ನಂತರ, ಮುಂಬೈ ಪೊಲೀಸರು ಸಂಪೂರ್ಣ ಅಲರ್ಟ್ ಆಗಿದ್ದು, ರತನ್ ಟಾಟಾ ಅವರ ವೈಯಕ್ತಿಕ ಭದ್ರತೆಯನ್ನು ಪೂರೈಸಲು ವಿಶೇಷ ತಂಡವನ್ನು ನಿಯೋಜಿಸಲಾಯಿತು ಮತ್ತು ಇತರ ತಂಡವು ಕರೆ ಮಾಡಿದವರ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಲು ಮುಂದಾಯಿತು. ಬಳಿಕ ಪೊಲೀಸರು ತನಿಖೆ ತೀವ್ರಗೊಳಿಸಿ ಬೆದರಿಕೆ ಕರೆಯ ಜಾಡು ಕಂಡುಹಿಡಿದಿದ್ದಾರೆ. ತಾಂತ್ರಿಕ ಬೆಂಬಲ ಮತ್ತು ಟೆಲಿಕಾಂ ಸೇವಾ ಪೂರೈಕೆದಾರರ ಸಹಾಯದಿಂದ ಕರೆ ಮಾಡಿದವರನ್ನು ಪತ್ತೆಹಚ್ಚಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಕರೆ ಮಾಡಿದವರ ಸ್ಥಳ ಕರ್ನಾಟಕದಲ್ಲಿ ಇರುವುದು ಪತ್ತೆಯಾಗಿದ್ದು, ಆತ ಪುಣೆ ನಿವಾಸಿ ಎಂದು ಪೊಲೀಸರು ತಿಳಿಸಿದ್ದಾರೆ. ಬೆದರಿಕೆ ಕರೆ ಮಾಡಿದ ಆರೋಪಿ ಎಂಬಿಎ ಪದವಿದರನೆನ್ನು ಪತ್ತೆಹಚ್ಚಲಾಗಿದೆ ಎಂದು ಮುಂಬೈ ಪೊಲೀಸರು ತಿಳಿಸಿದ್ದಾರೆ.

ತನಿಖೆಯ ಸಂದರ್ಭದಲ್ಲಿ ಅನಾಮಧೇಯ ಕರೆ ಮಾಡಿದ ವ್ಯಕ್ತಿಗೆ ಸ್ಕಿಜೋಫ್ರೇನಿಯಾ ಇದೆ ಎಂದು ತಿಳಿದು ಬಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಜನಗಣತಿ ಬಳಿಕ ಮಹಿಳಾ ಮಸೂದೆ ಜಾರಿ

ಮಂಗಳೂರು: ದೇಶದಲ್ಲಿ 2024ರ ಜನಗಣತಿಯ ನಂತರ ಮಹಿಳಾ ಮೀಸಲಾತಿ ಮಸೂದೆ ಜಾರಿಗೊಳಿಸಲು ಕೇಂದ್ರ ಸರ್ಕಾರ ಕ್ರಮಕೈಗೊಳ್ಳಲಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಇಂದಿಲ್ಲಿ ಹೇಳಿದ್ದಾರೆ. ರಾಷ್ಟ್ರ ನಿರ್ಮಾಣದಲ್ಲಿ ಮಹಿಳೆಯರ ಪಾತ್ರವನ್ನು ಪ್ರಧಾನಿ ನರೇಂದ್ರ ಮೋದಿ ಅವರು ಯಾವಾಗಲೂ ನಂಬಿರುವುದರಿಂದ ಮಹಿಳಾ ಮಸೂದೆ ಸಾಕಾರಗೊಂಡಿದೆ,2024ರ ನಂತರ ಜನಗತಿ ಆಧರಿಸಿ ಮಸೂದೆ ಜಾರಿಗೆ ಬರಲಿದೆ ಎಂದು ತಿಳಿಸಿದ್ದಾರೆ.ದಕ್ಷಿಣ ಕನ್ನಡ ಜಿಲ್ಲೆಯ ಮೂಡುಬಿದಿರೆಯಲ್ಲಿ ರಾಣಿ ಅಬ್ಬಕ್ಕ ಅವರ ಸ್ಮರಣಾರ್ಥ ಅಂಚೆ ಚೀಟಿ ಬಿಡುಗಡೆ ಮಾಡಿ ಮಾತನಾಡಿದ ಅವರುಪೋರ್ಚುಗೀಸ್ ವಿರುದ್ಧ ಹೋರಾಡಿದ 16 ನೇ ಶತಮಾನದ ಉಳ್ಳಾಲದ ರಾಣಿ ರಾಣಿ ಅಬ್ಬಕ್ಕ ಅವರ ಧೈರ್ಯ ಮತ್ತು ವೀರಾವೇಶವನ್ನು ಶ್ಲಾಘಿಸಿದ್ದಾರೆ.ಸಾಮ್ರಾಜ್ಯಶಾಹಿ ಶಕ್ತಿಗಳ ವಿರುದ್ಧ ಹೋರಾಡಿದ ಅನೇಕ ಅಜ್ಞಾತ ಹೋರಾಟಗಾರರ ಕೊಡುಗೆಗಳನ್ನು ದಾಖಲಿಸಲು ಕೇಂದ್ರ ಸರ್ಕಾರ ಕ್ರಮ ಕೈಗೊಂಡಿದೆ ಎಂದು ಹೇಳಿದ್ದಾರೆ.ಆಜಾದಿ ಕಾ ಅಮೃತ್ ಮಹೋತ್ಸವದ ಭಾಗವಾಗಿ, ಕೇಂದ್ರ ಸರ್ಕಾರ 14,500 ಕಥೆಗಳೊಂದಿಗೆ ಡಿಜಿಟಲ್ ಜಿಲ್ಲಾ ಭಂಡಾರವನ್ನು ಸಂಗ್ರಹಿಸಿದೆ, ಇದು ಸ್ವಾತಂತ್ರ್ಯ ಹೋರಾಟದೊಂದಿಗೆ ಸಂಬಂಧಿಸಿದ ಸ್ಥಳಗಳನ್ನು ಎತ್ತಿ ತೋರಿಸುತ್ತದೆ ಎಂದು ತಿಳಿಸಿದ್ದಾರೆ.ಸ್ವಾತಂತ್ರ್ಯ ಹೋರಾಟದಲ್ಲಿ ಮಹಿಳೆಯರ ಪಾತ್ರ, ಸಂವಿಧಾನ ಸಭೆಯಲ್ಲಿ ಮಹಿಳೆಯರು ಮತ್ತು ಸ್ವಾತಂತ್ರ್ಯ ಹೋರಾಟದ ಬುಡಕಟ್ಟು ನಾಯಕರ ಮೂರು ಪುಸ್ತಕಗಳನ್ನು ಹೊರತರಲು ಕೇಂದ್ರ ಸಂಸ್ಕೃತಿ ಸಚಿವಾಲಯ ಅಮರ ಚಿತ್ರ ಕಥಾದೊಂದಿಗೆ ಒಪ್ಪಂದ ಮಾಡಿಕೊಂಡಿದೆ ಎಂದು ಹೇಳಿದ್ದಾರೆ.ಶ್ರೀ ಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ ಮತ್ತು ಮುಖ್ಯ ಪೋಸ್ಟ್ ಮಾಸ್ಟರ್ ಜನರಲ್ ಎಸ್ ರಾಜೇಂದ್ರ ಕುಮಾರ್ ಉಪಸ್ಥಿತರಿದ್ದರು.

ಬೆಳಗಾವಿ ಮಹಿಳೆ ಮೇಲೆ ಹಲ್ಲೆ, ವಿವಸ್ತ್ರ ಪ್ರಕರಣ

ರಾಜ್ಯಾದ್ಯಂತ ಬಿಜೆಪಿ ಪ್ರತಿಭಟನೆ, ತೀವ್ರ ಖಂಡನೆ

ಬೆಂಗಳೂರು: ಬೆಳಗಾವಿ ಜಿಲ್ಲೆಯ ಗ್ರಾಮವೊಂದರಲ್ಲಿ ಮಹಿಳೆಯನ್ನು ವಿವಸ್ತ್ರಗೊಳಿಸಿ, ಹಲ್ಲೆ ನಡೆಸಿದ ಬುಡುಕಟ್ಟು ಮಹಿಳೆಗೆ ಪರಿಹಾರ ನೀಡುವಲ್ಲಿ ಕಾಂಗ್ರೆಸ್ ಸರ್ಕಾರ ನಿರಾಸಕ್ತಿ ತೋರಿದೆ ಎಂದು ಆರೋಪಿ ರಾಜ್ಯ ಬಿಜೆಪಿಯಿಂದ ಇಂದು ರಾಜ್ಯಾದ್ಯಂತ ಪ್ರತಿಭಟನೆ ನಡೆಸಲಾಯಿತು.

ಡಿಸೆಂಬರ್ 11 ರಂದು ಬೆಳಗಾವಿಯ ವಂಟಮುರಿ ಗ್ರಾಮದಲ್ಲಿ ಯುವಕನೊಬ್ಬ ತನ್ನ ಪ್ರೇಯಸಿಯೊಂದಿಗೆ ಓಡಿಹೋದ ನಂತರ ಆತನ ತಾಯಿಯನ್ನು ಕಂಬಕ್ಕೆ ಕಟ್ಟಿ ಥಳಿಸಲಾಗಿತ್ತು. ವಿವಸ್ತ್ರಗೊಳಿಸಿ ಮೆರವಣಿಗೆ ಮಾಡಲಾಗಿತ್ತು. ಈ ಸಂಬಂಧ ಪೊಲೀಸರು 8 ಜನರನ್ನು ಬಂಧಿಸಿದ್ದು, ಇನ್ನೂ ಎಂಟು ಮಂದಿ ತಲೆಮರೆಸಿಕೊಂಡಿದ್ದಾರೆ.

ಬೆಂಗಳೂರಿನ ಮೇಖ್ರಿ ಸರ್ಕಲ್ ನಲ್ಲಿ ಬಿಜೆಪಿ ಮಹಿಳಾ ಮೋರ್ಚಾ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ನೂರಾರು ಕಾರ್ಯಕರ್ತರು ಪಾಲ್ಗೊಂಡರು. ಈ ವೇಳೆ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರ ನಿವಾಸಕ್ಕೆ ಮುತ್ತಿಗೆ ಹಾಕಲು ಯತ್ನಿಸಿದ ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದು ಬಸ್ ಗಳಲ್ಲಿ ಕರೆದೊಯ್ದರು.

ಮಹಿಳಾ ವಿರೋಧಿ ಕಾಂಗ್ರೆಸ್ ಸರ್ಕಾರಕ್ಕೆ ಧಿಕ್ಕಾರ ! ಮಹಿಳೆಯರ ಮೇಲಿನ ದೌರ್ಜನ್ಯ ಹಾಗೂ ಭ್ರೂಣ ಹತ್ಯೆ ತಡೆಗಟ್ಟುವಲ್ಲಿ ವಿಫಲವಾಗಿರುವ ಕಾಂಗ್ರೆಸ್ ಸರ್ಕಾರದ ವಿರುದ್ಧ ಇಂದು ಬೆಂಗಳೂರಿನಲ್ಲಿ ಮಹಿಳಾ ಮೋರ್ಚಾ ವತಿಯಿಂದ ಪ್ರತಿಭಟನೆ ನಡೆಯಿತು. ಈ ಸಂದರ್ಭದಲ್ಲಿ ಮಾತನಾಡಿದ ಮಾಜಿ ಸಿಎಂ ಡಿ.ವಿ. ಸದಾನಂದಗೌಡ, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟು ಹೋಗಿದೆ. ಇಷ್ಟು ಕೆಟ್ಟು ಆಡಳಿತವನ್ನು ನನ್ನ ಜೀವನದಲ್ಲೇ ನೋಡಿಲ್ಲ. ರಾಜ್ಯದಲ್ಲಿ ಮಹಿಳೆಯರ ಮೇಲೆ ಅತ್ಯಾಚಾರ ಹೆಚ್ಚಾಗಿದೆ ಎಂದು ಆರೋಪಿಸಿದರು.ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ, ಬೆಳಗಾವಿಯಲ್ಲಿ ಮಹಿಳೆ ಮೇಲೆ ನಡೆದ ದೌರ್ಜನ್ಯ ಕುರಿತು ದೇಶವ್ಯಾಪಿ ಚರ್ಚೆ ನಡೆದಿದೆ. ರಾಜ್ಯ ಸರ್ಕಾರ ಈ ಘಟನೆಯನ್ನು ಗಂಭೀರವಾಗಿ ಪರಿಗಣಿಸಿಲ್ಲ. ರಾಜ್ಯದ ಮುಖ್ಯಮಂತ್ರಿಗಳು ಸಂತ್ರಸ್ತ ಮಹಿಳೆಯನ್ನು ಈವರೆಗೂ ಭೇಟಿ ಮಾಡಿಲ್ಲ, ಪರಿಹಾರ ಕೊಡುವ ಕೆಲಸವನ್ನೂ ಮಾಡಿಲ್ಲ ಎಂದು ಆರೋಪಿಸಿದರು.

ಬೆಳಗಾವಿಯಲ್ಲಿ ಪರಿಶಿಷ್ಟ ಪಂಗಡದ ಮಹಿಳೆಯ ಮೇಲೆ ಅಮಾನವೀಯ ಕೃತ್ಯ ನಡೆದ ಗ್ರಾಮಕ್ಕೆ ನಾಲ್ವರು ಸಂಸದರು ಸೇರಿದಂತೆ ಐವರು ಸದಸ್ಯರನ್ನೊಳಗೊಂಡ ಬಿಜೆಪಿ ಸತ್ಯಶೋಧನಾ ತಂಡ ಇಂದು ಭೇಟಿ ನೀಡಿ ಪರಿಶೀಲನೆ ನಡೆಸಿತು. ಈ ವೇಳೆ ಮಾತನಾಡಿದ ತಂಡದ ಸದಸ್ಯರಲ್ಲೊಬ್ಬರಾದ ಲಾಕೆಟ್ ಚಟರ್ಜಿ, ಆಡಳಿತವು ಆರಂಭದಲ್ಲಿ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಲಿಲ್ಲ. ಪೊಲೀಸರು ಪ್ರಕರಣ ದಾಖಲಿಸಿಕೊಳ್ಳಲು ಮುಂದಾಗಲಿಲ್ಲ. ಕರ್ನಾಟಕ ಹೈಕೋರ್ಟ್ ಚಾಟಿ ಬೀಸಿದ ನಂತರವೇ ಸರ್ಕಾರ ಕ್ರಮಕ್ಕೆ ಮುಂದಾಗಿದೆ ಎಂದು ಅವರು ಹೇಳಿದರು.

ನನ್ನ ಮಗ ಈ ಕೆಲಸ ಮಾಡಿಲ್ಲ–ಬಂಧಿತ ಆರೋಪಿ ಲಲಿತ್ ಝಾ ಪೋಷಕರು

ದರ್ಭಾಂಗಾ: ರಾಷ್ಟ್ರವನ್ನು ಬೆಚ್ಚಿ ಬೀಳಿಸಿದ ಸಂಸತ್ ಭದ್ರತಾ ಲೋಪ ಘಟನೆ ನಡೆದು ಮೂರು ವಾರ ಕಳೆದರೂ ಅದರ ಮಾಸ್ಟರ್ ಮೈಂಡ್ ಲಲಿತ್ ಝಾ ಅವರ ಪೋಷಕರು ಇನ್ನೂ ನಂಬುವ ಸ್ಥಿತಿಯಲ್ಲಿಲ್ಲ.ಬಿಹಾರದ ದರ್ಭಾಂಗಾ ಜಿಲ್ಲೆಯ ರಾಮ್‌ಪುರ ಉದಯ್‌ನಲ್ಲಿರುವ ತಮ್ಮ ನಿವಾಸದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ, ಲಲಿತ್ ಅವರ ತಂದೆ ದೇವಾನಂದ್, "ನನ್ನ ಮಗನ ಬಂಧನದ ಬಗ್ಗೆ ಇತರ ಜನರ ಮೂಲಕ ನನಗೆ ತಿಳಿಯಿತು. ನೀವೆಲ್ಲರೂ ನೋಡುವಂತೆ, ನಮ್ಮಲ್ಲಿ ಟಿವಿ ಸೆಟ್ ಕೂಡಾ ಇಲ್ಲ" ಎಂದರು. ದಿಗ್ಭ್ರಮೆಗೊಂಡಂತೆ ಕಾಣುತ್ತಿದ್ದ ಅವರ ಪತ್ನಿ ಮಂಜುಳಾ ಗದ್ಗದಿತರಾಗಿ "ನನ್ನ ಮಗ ರೌಡಿ ಅಲ್ಲ. ತಪ್ಪುಗಳನ್ನು ಮಾಡುತ್ತಿರಲಿಲ್ಲ. ಜನರಿಗೆ ಸಹಾಯ ಮಾಡುವುದನ್ನು ಇಷ್ಟಪಡುವವನು. ಮೂರು ಬಾರಿ ರಕ್ತದಾನ ಮಾಡಿದ್ದಾನೆ" ಎಂದು ಗೋಳಾಡಿದರು. ದಂಪತಿಗಳು ತಮ್ಮ 32 ವರ್ಷದ ಮಗನನ್ನು ಕೊನೆಯ

ಬಾರಿಗೆ ನೋಡಿ ಒಂದು ವಾರ ಕಳೆದಿದೆ. ಎರಡು ದಿನಗಳ ಹಿಂದೆ ನಾಲ್ವರ ಪೈಕಿ ಇಬ್ಬರು ಲೋಕಸಭೆಯ ಸಂದರ್ಶಕರ ಗ್ಯಾಲರಿಗೆ ಪ್ರವೇಶಿಸಿದರು. ಸಂಸತ್ತಿನ ಕಟ್ಟಡದೊಳಗೆ ಹಳದಿ ಹೊಗೆ ಸೂಸುವ ಟ್ಯೂಬ್ ಗಳನ್ನು ಕೊಂಡೊಯ್ದಿದ್ದರು. ಹಳೆಯ ಸಂಸತ್ ಭವನದಲ್ಲಿ 2001 ರ ಭಯೋತ್ಪಾದಕ ದಾಳಿಯ ವಾರ್ಷಿಕೋತ್ಸವದಂದೇ ನಡೆದ ಈ ಭದ್ರತಾ ಲೋಪ ಇಡೀ ರಾಷ್ಟ್ರವನ್ನು ಬೆಚ್ಚಿ ಬೀಳಿಸಿತು. ಡಿಸೆಂಬರ್ 10 ರಂದು ಅವರ ಪೋಷಕರು ದರ್ಭಾಂಗ್ ರೈಲು ಹತ್ತಿದಾಗ ಕೋಲ್ಕತ್ತಾದಲ್ಲಿಯೇ ಉಳಿದುಕೊಂಡಿದ್ದ ಲಲಿತ್ ಝಾ, ಪಶ್ಚಿಮ ಬಂಗಾಳದ ಆಡಳಿತಾರೂಢ ತೃಣಮೂಲ ಕಾಂಗ್ರೆಸ್‌ನೊಂದಿಗೆ ನಿಕಟ ಸಂಪರ್ಕ ಹೊಂದಿದ್ದಾರೆಂದು ಆರೋಪಿಸಲಾಗಿದೆ. ಇದು ಇಂಡಿಯಾ ಬಣದ ಅಂಗಪಕ್ಷವಾಗಿದೆ. ಈ ಆರೋಪವನ್ನು ಟಿಎಂಸಿ ತೀವ್ರವಾಗಿ ನಿರಾಕರಿಸಿದೆ. ಆದಾಗ್ಯೂ, ಅವರ ತಂದೆತಾಯಿಗಳು ತನ್ನ ಮಗನ ಕುರಿತು ಎದ್ದಿರುವ ಆರೋಪಗಳನ್ನು ನಿರಾಕರಿಸಿದರು.

"ನನ್ನ ಮಗ ಟ್ಯೂಷನ್ ಮಾಡುವ ಮೂಲಕ ನನಗೆ ಆರ್ಥಿಕವಾಗಿ ಸಹಾಯ ಮಾಡಲು ಪ್ರಾರಂಭಿಸಿದ ಒಬ್ಬ ಉಜ್ವಲ ವಿದ್ಯಾರ್ಥಿಯಾಗಿದ್ದ. ಛಾತ್ ಸಮಯದಲ್ಲಿ ಒಟ್ಟಿಗೆ ದರ್ಭಾಂಗಕ್ಕೆ ಬರಬೇಕಾಗಿತ್ತು. ನಾವು ಪ್ರತಿ ವರ್ಷ ಹಾಗೆ ಮಾಡುತ್ತಿದ್ದೆವು. ಈ ಬಾರಿ ವಿಪರೀತ ರಶ್ ಇದ್ದರಿಂದ ನಮಗೆ ಟಿಕೆಟ್ ಗಳು ಸಿಗಲಿಲ್ಲ. ಆದ್ದರಿಂದ ನಾವು ಭೇಟಿಯನ್ನು ಮುಂದೂಡಬೇಕಾಯಿತು

ಕಾಂಗ್ರೆಸ್ ನಿಂದ 'ದೇಶಕ್ಕಾಗಿ ದೇಣಿಗೆ' ಕ್ರೌಡ್‌ಫಂಡಿಂಗ್ ಅಭಿಯಾನ

ನವದೆಹಲಿ: 2024 ರ ಲೋಕಸಭೆ ಚುನಾವಣೆಗೆ ಮುಂಚಿತವಾಗಿ ಪಕ್ಷಕ್ಕೆ ಸಂಪನ್ಮೂಲ ಕ್ರೂಡಿಕರಿಸಲು ಕಾಂಗ್ರೆಸ್ ದೇಶಾದ್ಯಂತ 'ದೇಶಕ್ಕಾಗಿ ದೇಣಿಗೆ' ಕ್ರೌಡ್‌ಫಂಡಿಂಗ್ ಅಭಿಯಾನವನ್ನು ಪ್ರಾರಂಭಿಸುವುದಾಗಿ ಕಾಂಗ್ರೆಸ್ ಶನಿವಾರ ಘೋಷಿಸಿದೆ. ಡಿಸೆಂಬರ್ 18 ರಂದು ಕಾಂಗ್ರೆಸ್ ಮುಖ್ಯಸ್ಥ ಮಲ್ಲಿಕಾರ್ಜುನ ಖರ್ಗೆ ಅವರು ಈ ಅಭಿಯಾನಕ್ಕೆ ಚಾಲನೆ ನೀಡಲಿದ್ದಾರೆ. ಈ ಕುರಿತು ಎಐಸಿಸಿ ಪ್ರಧಾನ ಕಚೇರಿಯಲ್ಲಿಂದು ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೆಸಿ ವೇಣುಗೋಪಾಲ್, 18 ವರ್ಷಕ್ಕಿಂತ ಮೇಲ್ಪಟ್ಟ ಭಾರತೀಯರು ಕನಿಷ್ಠ 138 ರೂ. ಅಥವಾ 1,380 ರೂ. 13,800 ಮತ್ತು ಹೀಗೆ ದೇಣಿಗೆ ನೀಡಬಹುದು ಎಂದರು. 1920–21ರಲ್ಲಿ ನೂರು ವರ್ಷಗಳ ಹಿಂದೆ ಪ್ರಾರಂಭವಾದ ಮಹಾತ್ಮ ಗಾಂಧಿಯವರ ಐತಿಹಾಸಿಕ 'ತಿಲಕ್ ಸ್ವರಾಜ್ ನಿಧಿ'ಯಿಂದ ಈ ಕಾರ್ಯಕ್ರಮ ಪ್ರೇರಿತವಾಗಿದೆ. ಸಮಾನ ಸಂಪನ್ಮೂಲ ಹಂಚಿಕೆ ಮತ್ತು ಅವಕಾಶಗಳಿಂದ ಸಮೃದ್ಧವಾಗಿರುವ ಭಾರತವನ್ನು ರಚಿಸುವಲ್ಲಿ ಪಕ್ಷವನ್ನು ಸಬಲೀಕರಣಗೊಳಿಸುವ ಉದ್ದೇಶವನ್ನು ಹೊಂದಿದೆ ಎಂದು ಅವರು ಹೇಳಿದರು. ಕ್ರೌಡ್‌ಫಂಡಿಂಗ್ ಅಭಿಯಾನಕ್ಕಾಗಿ ಪಕ್ಷವು ಎರಡು ಆನ್‌ಲೈನ್ ಚಾನಲ್‌ಗಳನ್ನು ರಚಿಸಿದ್ದು, donateinc.in ಪೋರ್ಟಲ್ ಮತ್ತು ಕಾಂಗ್ರೆಸ್ ಅಧಿಕೃತ ವೆಬ್ ಸೈಟ್ inc.in ನಲ್ಲಿ ದೇಣಿಗೆ ನೀಡಬಹುದು. ಡಿಸೆಂಬರ್ 18 ರಂದು ಕಾಂಗ್ರೆಸ್ ಮುಖ್ಯಸ್ಥ ಖರ್ಗೆ ಅವರು ಅಧಿಕೃತವಾಗಿ ಅಭಿಯಾನಕ್ಕೆ ಚಾಲನೆ ನೀಡಲಿದ್ದಾರೆ ಮತ್ತು ಅದೇ ಸಮಯದಲ್ಲಿ ದೇಣಿಗೆ ಲಿಂಕ್ ಲೈವ್ ಆಗಲಿದೆ ಎಂದು ವೇಣುಗೋಪಾಲ್ ಹೇಳಿದರು.

ಸಂಸದ ಪ್ರತಾಪ್ ಸಿಂಹಗೆ ಕಾನೂನು ಸಂಕಷ್ಟ..!

ಬೆಂಗಳೂರು: ದೇಶವನ್ನೇ ಬೆಚ್ಚಿ ಬೀಳಿಸಿದ್ದ ಹೊಸ ಸಂಸತ್ ಭವನದ ಮೇಲೆ ನಡೆದ ಭದ್ರತಾ ಲೋಪ ಕುರಿತಾಗಿ ಬಿಜೆಪಿಯ ಮೈಸೂರು–ಕೊಡಗು ಲೋಕಸಭಾ ಸದಸ್ಯ ಪ್ರತಾಪ್ ಸಿಂಹ ಅವರಿಗೆ ಕಾನೂನಿನ ಸಂಕಷ್ಟ ಎದುರಾಗಿದೆ. ಈ ಘಟನೆಯನ್ನು ಗಂಭೀರವಾಗಿ ಪರಿಗಣಿಸಿರುವ ದೆಹಲಿ ವಿಶೇಷ ಘಟಕದ ಪೊಲೀಸರು ವಿಚಾರಣೆಗೆ ಹಾಜರಾಗುವಂತೆ ಪ್ರತಾಪ್ ಸಿಂಹ ಅವರಿಗೆ ನೋಟಿಸ್ ನೀಡಲು ಮುಂದಾಗಿದೆ. ಮುಂದಿನ ವಾರ ನೋಟಿಸ್ ನೀಡುವ ಸಂಭವ ಹೆಚ್ಚಾಗಿದ್ದು, ಪ್ರಕರಣ ಕುರಿತಂತೆ ದೆಹಲಿ ವಿಶೇಷ ಘಟಕದ ಅಪರಾಧ ವಿಭಾಗದ ಹಿರಿಯ ನೇತೃತ್ವದ ಪೊಲೀಸ್ ತಂಡ ವಿಚಾರಣೆಗೆ ಒಳಪಡಿಸಲು ಮುಂದಾಗಿದ್ದಾರೆ.ಸಂಸತ್

ಹೈಕಮಾಂಡ್ ಭೇಟಿ ಬಳಿಕ ನನ್ನ ನಿರ್ಧಾರ ಪ್ರಕಟಿಸುವೆ: ಸೋಮಣ್ಣ

ಮೈಸೂರು: 'ಪಕ್ಷದ ಹೈಕಮಾಂಡ್ ಜೊತೆ ಮಾತನಾಡಲು ಈಗ ಕಾಲ ಪಕ್ವವಾಗಿದೆ. ಡಿ.19ರ ನಂತರ ಡಿ.22ರ ಒಳಗೆ ನಾವು ನಾಲ್ಕೈದು ಜನ ವರಿಷ್ಠರನ್ನು ಭೇಟಿ ಮಾಡುತ್ತೇವೆ. ನಂತರ ನನ್ನ ಮುಂದಿನ ನಿರ್ಧಾರ ಪ್ರಕಟಿಸುತ್ತೇನೆ. ಕಾಲ ಬಂದಾಗ ಎಲ್ಲವನ್ನೂ ನೇರವಾಗಿಯೇ ಹೇಳುತ್ತೇನೆ' ಎಂದು ಬಿಜೆಪಿ ಮುಖಂಡ ವಿ.ಸೋಮಣ್ಣ ತಿಳಿಸಿದರು.

ಪತ್ರಕರ್ತರೊಂದಿಗೆ ಶನಿವಾರ ಮಾತನಾಡಿದ ಅವರು, 'ಹೈಕಮಾಂಡ್ ಜೊತೆ ಎಲ್ಲಾ ವಿಚಾರ ಚರ್ಚೆ ಮಾಡುತ್ತೇವೆ. ವರಿಷ್ಠರು ಏನು ಹೇಳುತ್ತಾರೆಯೋ ಅದರಂತೆ ನಡೆದುಕೊಳ್ಳುತ್ತೇನೆ. ವಿಧಾನಸಭೆ ಚುನಾವಣೆಯಲ್ಲಿ ಸೋಲಿನ ವಿಚಾರ, ಅದಕ್ಕೆ ಕಾರಣವೇನು? ಯಾರು ಕಾರಣ ಎಂಬುದನ್ನು ವಿವರವಾಗಿ ಹೇಳುತ್ತೇನೆ' ಎಂದರು.

'ದೇಶಕ್ಕೆ ಪ್ರಧಾನಿ ನರೇಂದ್ರ ಮೋದಿ ನಾಯಕತ್ವ ಬೇಕಿದೆ. ಅದು ನನ್ನ ಪ್ರತಿಪಾದನೆ' ಎಂದು ಪ್ರತಿಕ್ರಿಯಿಸಿದರು.

'ಏನೇನಾಗಿದೆ ಎಂಬುದನ್ನು ಡಿ.6ರ ನಂತರ ಹೇಳುತ್ತೇನೆ ಎಂದು ತಿಳಿಸಿದ್ದು ನಿಜ. ಒಳ್ಳೆಯತನಕ್ಕೆ ಹಾಗೂ ದುಡಿಮೆ ಮಾಡಿದ ನನಗೆ ಆಗಿರುವ ಹಿನ್ನಡೆಯನ್ನು ಯಾವ ರೀತಿ ಸ್ವೀಕರಿಸಿದ್ದೇನೆ ಎನ್ನುವುದು ಎಲ್ಲರಿಗೂ ಗೊತ್ತಿದೆ. ಅದು ಪಕ್ಷಕ್ಕೂ ಮನವರಿಕೆಯಾಗಿದೆ. ಕಾರ್ತಿಕ ಹೋಗಿ ಧನುರ್ಮಾಸವೂ ಶುರುವಾಗಿದೆ. ಶೀಘ್ರದಲ್ಲೇ ಎಲ್ಲವನ್ನೂ ಹೇಳುವೆ' ಎಂದರು.

ಬೆಳಗಾವಿಯಲ್ಲಿ ಈಚೆಗೆ ನಡೆದ ಕಾಂಗ್ರೆಸ್ ಶಾಸಕಾಂಗ ಸಭೆಯ ನಂತರದ ಔತಣ ಕೂಟಕ್ಕೆ ಬಿಜೆಪಿಯ ಕೆಲವು ಶಾಸಕರು ಹೋಗಿದ್ದ ಬಗ್ಗೆ ಪ್ರತಿಕ್ರಿಯಿಸಿದ ಅವರು, 'ಅದನ್ನು ಪಕ್ಷ ಗಮನಿಸುತ್ತದೆ. ಎಸ್.ಟಿ. ಸೋಮಶೇಖರ್ ಹಾಗೂ ಶಿವರಾಮ್ ಹೆಬ್ಬಾರ್ ಕಾಂಗ್ರೆಸ್‌ನಿಂದ ಬಂದವರು. ಸೌಹಾರ್ದದ ಕಾರಣಕ್ಕೆ ಔತಣ ಕೂಟಕ್ಕೆ ಹೋಗಿರಬಹುದು. ಊಟಕ್ಕೆ ಹೋದ ಮಾತ್ರಕ್ಕೆ ಎಲ್ಲವೂ ಸರಿ ಇಲ್ಲ ಎಂದುಕೊಳ್ಳುವುದು ತಪ್ಪು. ಎಲ್ಲವೂ ಸುಖಾಂತ್ಯವಾಗಲಿದೆ' ಎಂದು ಹೇಳಿದರು.

'ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧೆ ಬಗ್ಗೆ ಯೋಚಿಸಿಲ್ಲ. ವರಿಷ್ಠರ ಭೇಟಿ ನಂತರ, ಅವರು ನೀಡುವ ಸೂಚನೆಯಂತೆ ನಡೆದುಕೊಳ್ಳುತ್ತೇನೆ' ಎಂದು ಪ್ರತಿಕ್ರಿಯಿಸಿದರು.

ಬೆಳಗಾವಿ ಜಿಲ್ಲೆಯ ನಗರದ ಪ್ರದೇಶದಲ್ಲಿ ವಿಕಸಿತ ಭಾರತ ಸಂಕಲ್ಪ ಯಾತ್ರೆಯ ಅಭಿಯಾನಕ್ಕೆ ಚಾಲನೆ

ಬೆಳಗಾವಿ ಜಿಲ್ಲೆಯಲ್ಲಿ ವಿಕಸಿತ ಭಾರತ ಸಂಕಲ್ಪ ಯಾತ್ರೆ ಅಭಿಯಾನ ಯಶಸ್ವಿಯಾಗಿ ಮುಂದುವರೆದಿದ್ದು, ಇಂದು ನಗರ ಪ್ರದೇಶದ ಅಭಿಯಾನ ಬೆಳಗಾವಿ ಮಹಾನಗರ ಪಾಲಿಕೆ ಆವರಣದಲ್ಲಿ ಲೋಕಸಭಾ ಸದಸ್ಯ ಅಣ್ಣಾಸಾಹೇಬ ಜೊಲ್ಲೆ ಹಾಗೂ ರಾಜ್ಯಸಭಾ ಸದಸ್ಯರಾದ ಈರಣ್ಣ ಕಡಾಡಿ ಚಾಲನೆ ನೀಡಲಾಯಿತು. ಬೆಳಗಾವಿ ಮಹಾನಗರ ಪಾಲಿಕೆ ಮಹಾಪೌರ ಶೋಭಾ ಸೋಮನಾಚೆ, ಉಪಮಹಾಪೌರ ರೇಶ್ಮಾ ಪಾಟೀಲ, ವಿಕಾಸಿತ ಭಾರತ ಸಂಕಲ್ಪ ಯಾತ್ರೆಯ ಬೆಳಗಾವಿ ಮತ್ತು ಬಾಗಲಕೋಟ ಜಿಲ್ಲಾ ಪ್ರಭಾರಿ ವಿನೋಧ ಸೇಶನ್, ಜಿಲ್ಲಾ ಅಗ್ರಣಿ ಬ್ಯಾಂಕ್ ವ್ಯವಸ್ಥಾಪಕ ಪಿ. ಆರ್. ಕುಲಕರ್ಣಿ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

ನಗರ ಪ್ರದೇಶದಲ್ಲಿಯೂ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ,ಪ್ರಧಾನಿ ನರೇಂದ್ರ ಮೋದಿಯವರು ಫಲಾನುಭವಿಗಳೊಂದಿಗೆ ನಡೆಸಿದ ವರ್ಚ್ಯುಯಲ್ ಸಂವಾದವನ್ನು ವೀಕ್ಷಿಸಿದರು.

ಈರಣ್ಣ ಕಡಾಡಿ: ದೂರದರ್ಶನಕ್ಕೆ ಮಾತನಾಡಿದ ಸಂಸದ ಈರಣ್ಣ ಕಡಾಡಿ, "ಪ್ರಧಾನಿ ನರೇಂದ್ರ ಮೋದಿ ಅವರ ಸಮಗ್ರ ಅಭಿವೃದ್ಧಿಯ ಕನಸಿನ ಭಾರತ ನಿರ್ಮಾಣದ ಹಿನ್ನಲೆಯಲ್ಲಿ ಹಮ್ಮಿಕೊಂಡ ವಿಕಸಿತ ಭಾರತ ಸಂಕಲ್ಪ ಯಾತ್ರೆ ಬೆಳಗಾವಿ ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ಈಗಾಗಲೇ ಯಶಸ್ವಿಯಾಗಿ ಮುನ್ನಡೆದಿದೆ. ಪ್ರಸ್ತುತ ನಗರ ಪ್ರದೇಶಗಳಲ್ಲಿ ಮೋದಿ ಗ್ಯಾರಂಟಿ ಯೋಜನೆ ಜಾಗೃತಿಯ ವಾಹನ ಸಂಚಿಸಿ ವಿವಿಧ ಯೋಜನೆಗಳ ತಿಳುವಳಿ ನೀಡಲಾಗುತ್ತಿದೆ. ಸಾರ್ವಜನಿಕರು ಇದರ ಲಾಭ ಪಡೆದುಕೊಳ್ಳಬೇಕೆಂದು" ಕರೆ ನೀಡಿದರು.

ಅಭಯ ಪಾಟೀಲ: ಶಾಸಕ ಅಭಯ ಪಾಟೀಲ, " ಜನರಿಗೆ ಪ್ರಧಾನಿಯವರ ಯೋಜನೆಗಳು ಹಾಗೂ ಭವಿಷ್ಯ ನಿರ್ಮಾಣದ ಬಗ್ಗೆ ತಿಳಿಸಿಕೊಡುವ ಪ್ರಯತ್ನ ಈ ಅಭಿಯಾನದ ಮುಖ್ಯ ಉದ್ದೇಶವಾಗಿದೆ " ಎಂದು ತಿಳಿಸಿದರು.

ಅಲ್ಮನ್ ಗೋಕಾಕ್: ಅಲ್ಮನ್ ಗೋಕಾಕ ಎಂಬ ಮಹಿಳಾ ಫಲಾನುಭವಿ, "ಪ್ರಧಾನ ಮಂತ್ರಿ ಸ್ವನಿಧಿ ಯೋಜನೆಯಿಂದ ತಾವು ವ್ಯಾಪಾರಕ್ಕೆ ಹೆಚ್ಚು ಅನುಕೂಲವಾಗಿದ್ದು, ಕೌಟುಂಬಿಕ ಆರ್ಥಿಕ ಸಮಸ್ಯೆಗಳ ನಿವಾರಣೆಗೆ ಸಾಧ್ಯವಾಗಿದೆ ಎಂದು ತಿಳಿಸಿದ್ದಾರೆ.

ಬಾಯಿ ಹುಣ್ಣಿಗೆ ಇಲ್ಲಿದೆ ಮನೆಮದ್ದು

ಅನೇಕರು ಬಾಯಿ ಹುಣ್ಣು ಅಂದ್ರೆ ತುಂಬಾನೆ ದೊಡ್ಡ ಸಮಸ್ಯೆ ಎಂದು ಭಾವಿಸುತ್ತಾರೆ. ಆದರೆ ಇದೊಂದು ಸಾಧಾರಣ ಸಮಸ್ಯೆಯಾಗಿದ್ದು, ಈ ಸಮಸ್ಯೆ ಹಲವರಿಗೆ ಮೇಲಿಂದ ಮೇಲೆ ಕಾಡುತ್ತದೆ. ಇನ್ನು ಕೆಲವರಿಗೆ 2–3 ತಿಂಗಳಿಗೊಮ್ಮೆ ಕಾಡುತ್ತದೆ.

ಇದರಿಂದಾಗಿ ಕೆಲವೊಮ್ಮೆ ಮಾತನಾಡಲು, ತಿನ್ನಲು ಸಹ ಕಷ್ಟವಾಗುತ್ತದೆ. ಈ ಹುಣ್ಣುಗಳು ಹೆಚ್ಚಾಗಿ ಒಸಡಿನ ಮೇಲೆ ಹಾಗೂ ನಾಲಿಗೆ ಬದಿಯಲ್ಲಿ ಕಂಡು ಬರುತ್ತವೆ. ಇವು ಅಲ್ಪಾವಧಿ ಹಾಗೂ ದೀರ್ಘಾವಧಿಯವರೆಗೆ ಕಾಡುತ್ತವೆ. ಬಾಯಿ ಹುಣ್ಣಿನಿಂದ ಮುಕ್ತಿ ಕಾಣಲು ಮನೆಮದ್ದುಗಳು ಇಲ್ಲಿವೆ.

* ಬೆಳಿಗ್ಗೆ ಹಲ್ಲುಜ್ಜಿದ ಬಳಿಕ ಶುದ್ಧವಾದ ತೆಂಗಿನ ಎಣ್ಣೆಯನ್ನು ತೆಗೆದುಕೊಂಡು 10 ನಿಮಿಷಗಳ ಕಾಲ ಬಾಯಿ ಮುಕ್ಕಳಿಸಬೇಕು. ಇದು ಬಾಯಿಯಲ್ಲಿ ಆಗಿರುವಂತಹ ಹುಣ್ಣನ್ನು ಶಮನ ಮಾಡುತ್ತದೆ.

* ಊಟದಲ್ಲಿ ಜಾಸ್ತಿ ತರಕಾರಿಗಳು ಹಾಗೂ ಹಣ್ಣುಗಳನ್ನು ಸೇವಿಸಬೇಕು. ಅಲ್ಲದೇ ಕಾಫಿ, ಆಲ್ಕೋಹಾಲ್ ಮತ್ತು ತಂಪು ಪಾನೀಯವನ್ನ ತ್ಯಜಿಸಬೇಕು. ಜಂಕ್‌ಫುಡ್ ತಿನ್ನಬೇಡಿ

ಹಾಗೂ ಸರಿಯಾಗಿ ನೀರು ಕುಡಿಯಿರಿ. ಹೀಗೆ ಮಾಡಿದರೆ ಬಾಯಿಯ ಹುಣ್ಣು ದೂರವಾಗಲಿದೆ.

* ವಿಟಮಿನ್ BI ಮತ್ತು B12, ಸತು ಮತ್ತು ಕಬ್ಬಿಣಾಂಶವನ್ನು ಹೊಂದಿರುವ ಆಹಾರವನ್ನು ಹೆಚ್ಚು ಸೇವಿಸಬೇಕು. ಏಕೆಂದರೆ ಕೆಲವೊಮ್ಮೆ ವಿಟಮಿನ್ ಕೊರತೆಯಿಂದಾಗಿ ಬಾಯಿಯಲ್ಲಿ ಹುಣ್ಣು ಆಗಬಹುದು.

* ಅರಿಶಿನವನ್ನು ಹುಣ್ಣಾಗಿರುವ ಜಾಗಕ್ಕೆ ಲೇಪಿಸುವುದರಿಂದ ಇದು ನೋವನ್ನು ಕಡಿಮೆ ಮಾಡುತ್ತದೆ.

* ಒಂದು ಚಮಚ ಉಪ್ಪನ್ನು ಒಂದು ಗ್ಲಾಸ್ ನೀರಿಗೆ ಬೆರೆಸಿ, ಪ್ರತಿದಿನ 2–3 ಬಾರಿ ಮುಕ್ಕಳಿಸುವುದರಿಂದ ಬಾಯಿಹುಣ್ಣಿನ ನೋವು ಹಾಗೂ ಹುಣ್ಣು ವಾಸಿಯಾಗುತ್ತೆ.

ಈ ಕಾಯಿಲೆ ಇರುವವರು ಚಳಿಗಾಲದಲ್ಲಿ ಮೂಲಂಗಿ ಸೇವಿಸಿದ್ರೆ ಮತ್ತಷ್ಟು ಹದಗೆಡುತ್ತದೆ ಆರೋಗ್ಯ..!

ಚಳಿಗಾಲದಲ್ಲಿ ಮೂಲಂಗಿಯನ್ನು ತಿನ್ನುವುದು ಆರೋಗ್ಯಕ್ಕೆ ಒಳ್ಳೆಯದು ಎಂದು ಪರಿಗಣಿಸಲಾಗುತ್ತದೆ. ಇದು ಅಂತಹ ಪೋಷಕಾಂಶಗಳನ್ನು ಒಳಗೊಂಡಿದೆ, ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ ಮತ್ತು ಶೀತದಿಂದ ಪರಿಹಾರವನ್ನು ನೀಡುತ್ತದೆ.

ಈ ದಿನಗಳಲ್ಲಿ ನೀವು ಮೂಲಂಗಿ ಸಾಂಬಾರ್, ಪಲ್ಯ, ಪರೋಟ ಅಥವಾ ಸಲಾಡ್ ರೂಪದಲ್ಲಿ ತಿನ್ನಬಹುದು. ಆದರೆ ಕೆಲವೊಂದು ನಿರ್ದಿಷ್ಟ ಸಮಸ್ಯೆ ಮತ್ತು ಕಾಯಿಲೆಯಿಂದ ಬಳಲುತ್ತಿರುವವರು ಚಳಿಗಾಲದಲ್ಲಿ ಮೂಲಂಗಿ ಸೇವಿಸುವುದು ಅಪಾಯಕಾರಿ.

ಈ ರೋಗಿಗಳು ಮೂಲಂಗಿಯನ್ನು ಸೇವಿಸಬಾರದು ರಕ್ತದಲ್ಲಿ ಸಕ್ಕರೆ ಅಂಶ ಕಡಿಮೆ ಇರುವವರು ಮೂಲಂಗಿಯನ್ನು ತಿನ್ನಬಾರದು.

ಡಿಹೈಡ್ರೇಶನ್ ಸಮಸ್ಯೆ ಇರುವವರು ಕೂಡ ಮೂಲಂಗಿ ಸೇವನೆ ಮಾಡದೇ ಇರುವುದು ಉತ್ತಮ. ಮೂಲಂಗಿ ತಿನ್ನುವುದರಿಂದ ದೇಹದಲ್ಲಿ ಹೆಚ್ಚು ಮೂತ್ರವು ರೂಪುಗೊಳ್ಳಲು ಪ್ರಾರಂಭಿಸುತ್ತದೆ. ಪರಿಣಾಮ ನೀರಿನಂಶ ಮತ್ತಷ್ಟು ಕಡಿಮೆಯಾಗುತ್ತದೆ.

ಕಡಿಮೆ ರಕ್ತದೊತ್ತಡದಿಂದ ಬಳಲುತ್ತಿರುವವರು ಕೂಡ ಚಳಿಗಾಲದಲ್ಲಿ ಮೂಲಂಗಿ ತಿನ್ನದೇ ಇರುವುದು ಸೂಕ್ತ. ಮೂಲಂಗಿ ಅವರ ರಕ್ತದೊತ್ತಡವನ್ನು ಮತ್ತಷ್ಟು ಕಡಿಮೆ ಮಾಡುತ್ತದೆ. ಇದರಿಂದಾಗಿ ರಕ್ತ ಪೂರೈಕೆಯಲ್ಲಿ ಅನೇಕ ರೀತಿಯ ಸಮಸ್ಯೆಗಳು ಬರಲು ಪ್ರಾರಂಭಿಸುತ್ತವೆ.

ಥೈರಾಯ್ಡ್ ನಿಂದ ಬಳಲುತ್ತಿರುವವರು ಕೂಡ ಮೂಲಂಗಿಯನ್ನು ತಿನ್ನಬಾರದು. ಮೂಲಂಗಿ ಸೇವನೆಯಿಂದ ದೇಹದ ಹಾರ್ಮೋನ್ ಗಳು ಋಣಾತ್ಮಕವಾಗಿ ಹೆಚ್ಚಾಗಲು ಮತ್ತು ಕಡಿಮೆಯಾಗಲು ಪ್ರಾರಂಭಿಸುತ್ತವೆ. ಇದರಿಂದಾಗಿ ಅನೇಕ ರೀತಿಯ ಅಸ್ವಸ್ಥತೆಗಳು ಬರುತ್ತವೆ. ನೀವು ಮೂಲಂಗಿಯನ್ನು ತಿನ್ನಲು ಬಯಸಿದರೆ ಮೊದಲು ವೈದ್ಯರನ್ನು ಒಮ್ಮೆ ಸಂಪರ್ಕಿಸಿ ಸಲಹೆ ಪಡೆದುಕೊಳ್ಳಿ.

ದಿನಕ್ಕೆಷ್ಟು ಪಿಸ್ತಾ ತಿಂದರೆ ಆರೋಗ್ಯಕ್ಕೆ ಉತ್ತಮ? ಇಲ್ಲಿದೆ ತಜ್ಞ ವೈದ್ಯರ ಸಲಹೆ

ಪಿಸ್ತಾ ಅತ್ಯಂತ ರುಚಿಕರ ಡ್ರೈಫ್ರೂಟ್. ಜನರು ಇದನ್ನು ಹಬ್ಬಗಳಲ್ಲಿ ಅಥವಾ ಇತರ ವಿಶೇಷ ಸಂದರ್ಭದಲ್ಲಿ ಆತ್ಮೀಯರಿಗೆ ಉಡುಗೊರೆ–ಯಾಗಿ ನೀಡುತ್ತಾರೆ. ಉಪ್ಪು ಹಾಕಿ ಹುರಿದ ಪಿಸ್ತಾ ಸಂಜೆಯ ಸ್ನಾಕ್‌ಗೆ ಹೇಳಿ ಮಾಡಿಸಿದಂತಿರುತ್ತದೆ. ಇದು ಪೌಷ್ಟಿಕ ಆಹಾರ ಎಂಬುದರಲ್ಲಿ ಎರಡು ಮಾತಿಲ್ಲ, ಆದರೆ ಇದರ ಸೇವನೆಯ ಮಿತಿ ತಿಳಿದಿರಲೇಬೇಕು.

ಪಿಸ್ತಾದಲ್ಲಿ ಯಾವುದೇ ಪೋಷಕಾಂಶಗಳ ಕೊರತೆಯಿಲ್ಲ. ಇದು ಸಾಕಷ್ಟು ವಿಟಮಿನ್ ಬಿ 6, ವಿಟಮಿನ್ ಸಿ, ಫೈಬರ್, ಸತು, ತಾಮ್ರ, ಪೊಟ್ಯಾಸಿಯಮ್, ಕಬ್ಬಿಣ ಮತ್ತು ಕ್ಯಾಲ್ಸಿಯಂ ಹೊಂದಿದೆ. ಆದರೆ ಅತಿಯಾದ ಪಿಸ್ತಾ ಸೇನವೆ ಹಾನಿ ಉಂಟುಮಾಡುತ್ತವೆ.

ಒಂದು ದಿನದಲ್ಲಿ ಎಷ್ಟು ಪಿಸ್ತಾ ತಿನ್ನಬೇಕು ಹೆಚ್ಚಿನ ಆಹಾರ ತಜ್ಞರು ದಿನಕ್ಕೆ 15 ರಿಂದ 20 ಗ್ರಾಂ ಪಿಸ್ತಾವನ್ನು ತಿನ್ನಲು ಶಿಫಾರಸು ಮಾಡುತ್ತಾರೆ. ನೀವು ಇದನ್ನು ಹಲವು ವಿಧಗಳಲ್ಲಿ ತಿನ್ನಬಹುದು. ನೀರಿನಲ್ಲಿ ನೆನೆಸಿಟ್ಟು ಸೇವನೆ ಮಾಡಬಹುದು. ಹುರಿದು ಕೂಡ ತಿನ್ನಬಹುದು.

ಮಿತಿಮೀರಿ ಪಿಸ್ತಾಗಳನ್ನು ಸೇವಿಸಿದರೆ ಅತಿಸಾರ, ಹೊಟ್ಟೆ ನೋವು, ಕರುಳಿನ ನೋವು

ಮತ್ತಿತರ ಸಮಸ್ಯೆಗಳು ಉಂಟಾಗಬಹುದು.

ಆದರೆ ನಿಗದಿತ ಪ್ರಮಾಣದಲ್ಲಿ ತಿನ್ನುವುದು ಅಪಾರ ಆರೋಗ್ಯ ಪ್ರಯೋಜನಗಳನ್ನು ಹೊಂದಿದೆ. ಪಿಸ್ತಾ ನಮ್ಮ ಕೂದಲು ಮತ್ತು ಚರ್ಮಕ್ಕೆ ತುಂಬಾ ಪ್ರಯೋಜನಕಾರಿ. ಅದರಲ್ಲಿರುವ ತಾಮ್ರ ಮತ್ತು ವಿಟಮಿನ್ ಇ, ಕೂದಲು ಮತ್ತು ಚರ್ಮವನ್ನು ಆರೋಗ್ಯಕರವಾಗಿರಿಸುತ್ತದೆ. ಶುಷ್ಕತೆಯನ್ನು ಹೋಗಲಾಡಿಸುತ್ತದೆ.

ರಕ್ತಹೀನತೆ, ಆಯಾಸ ಮತ್ತು ದೌರ್ಬಲ್ಯ ಹೊಂದಿರುವ ಜನರು ಪಿಸ್ತಾವನ್ನು ತಿನ್ನಬೇಕು. ಏಕೆಂದರೆ ಅದರಲ್ಲಿ ಕಬ್ಬಿಣ ಸಮೃದ್ಧವಾಗಿದೆ, ಇದು ರಕ್ತಹೀನತೆಯ ಸಮಸ್ಯೆಯನ್ನು ತೆಗೆದುಹಾಕುತ್ತದೆ.

ವಿಟಮಿನ್ ಬಿ6 ಮತ್ತು ಸತುವು ಪಿಸ್ತಾದಲ್ಲಿ ಕಂಡುಬರುತ್ತದೆ, ಇದು ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ ಮತ್ತು ಸೋಂಕಿನ ಅಪಾಯವನ್ನು ಹೆಚ್ಚಿನ ಪ್ರಮಾಣದಲ್ಲಿ ಕಡಿಮೆ ಮಾಡುತ್ತದೆ. ಪಿಸ್ತಾದಲ್ಲಿ ಫೈಬರ್ ಹೇರಳವಾಗಿದೆ. ಇದ–ರಿಂದಾಗಿ ಜೀರ್ಣಕ್ರಿಯೆಯು ಆರೋಗ್ಯಕರವಾಗಿರುತ್ತದೆ ಮತ್ತು ಹೊಟ್ಟೆಗೆ ಸಂಬಂಧಿಸಿದ ಸಮಸ್ಯೆಗಳು ದೂರವಾಗುತ್ತವೆ.

ತೂಕವನ್ನು ವೇಗವಾಗಿ ಕಳೆದುಕೊಳ್ಳಲು ಬಯಸುವವರು, ನಿಯಮಿತವಾಗಿ ಪಿಸ್ತಾವನ್ನು ತಿನ್ನಬೇಕು. ಏಕೆಂದರೆ ಇದನ್ನು ಸೇವಿಸುವುದರಿಂದ ದೀರ್ಘಕಾಲದವರೆಗೆ ಹೊಟ್ಟೆ ತುಂಬಿದ ಅನುಭವವಾಗುತ್ತದೆ. ನಂತರ ನೀವು ಅತಿಯಾಗಿ ತಿನ್ನುವುದರಿಂದ ಪಾರಾಗುತ್ತೀರಿ.

ಪಿಸ್ತಾಗಳನ್ನು ನಮ್ಮ ಕಣ್ಣು ಮತ್ತು ಮೆದುಳಿಗೆ ಸಹ ಪ್ರಯೋಜನಕಾರಿ ಎಂದು ಪರಿಗಣಿಸಲಾಗುತ್ತದೆ. ಇದನ್ನು ತಿನ್ನುವುದರಿಂದ ಕಣ್ಣುಗಳು ಚುರುಕಾಗುತ್ತವೆ ಮತ್ತು ಮಾನಸಿಕ ಆರೋಗ್ಯವೂ ಉತ್ತಮವಾಗಿರುತ್ತದೆ.

ಮಧುಮೇಹ ತಡೆಗೆ ವಿಟಮಿನ್ ಕೆ ಸಹಾಯಕ: ಕೆನಡಾ ಸಂಶೋಧಕರು

ಟೊರೊಂಟೊ: ಕೆನಡಾದ ಸಂಶೋಧಕರು ವಿಟಮಿನ್ ಕೆ ಮಧುಮೇಹವನ್ನು ತಡೆಯಲು ಸಹಾಯ ಮಾಡುತ್ತದೆ ಎಂದು ಹೇಳಿದ್ದಾರೆ. ಯೂನಿವರ್ಸಿಟ್ ಡಿ ಮಾಂಟ್ರಿಯಲ್ ತಂಡವು ಬೀಟಾ ಕೋಶಗಳಲ್ಲಿ ವಿಟಮಿನ್ ಕೆ ಮತ್ತು ಗಾಮಾ–ಕಾರ್ಬಾಕ್ಸಿಲೇಷನ್‌ನ ಸಂಭಾವ್ಯ ರಕ್ಷಣಾತ್ಮಕ ಪಾತ್ರವನ್ನು ಗುರುತಿಸಿದೆ.

ವಿಟಮಿನ್ ಕೆ ರಕ್ತ ಹೆಪ್ಪುಗಟ್ಟುವಿಕೆಯಲ್ಲಿ ಅದರ ಪಾತ್ರಕ್ಕೆ ಹೆಸರುವಾಸಿಯಾದ ಸೂಕ್ಷ್ಮ ಪೋಷಕಾಂಶವಾಗಿದೆ, ನಿರ್ದಿಷ್ಟವಾಗಿ ಗಾಮಾ–ಕಾರ್ಬಾಕ್ಸಿಲೇಷನ್–ಪ್ರಕ್ರಿಯೆಗೆ ಅಗತ್ಯವಾದ ಕಿಣ್ವಕ ಪ್ರತಿಕ್ರಿಯೆಯಾಗಿದೆ.

ಇನ್ಸುಲಿನ್ ಸ್ರವಿಸುವಿಕೆಯ ಅಡಚಣೆಯನ್ನು ತಡೆಗಟ್ಟಲು ಬೀಟಾ ಕೋಶಗಳಲ್ಲಿ ಕ್ಯಾಲ್ಸಿಯಂನ ಶಾರೀರಿಕ ಮಟ್ಟವನ್ನು ಕಾಪಾಡಿಕೊಳ್ಳುವಲ್ಲಿ ಈ ಪ್ರೋಟೀನ್ ಪ್ರಮುಖ ಪಾತ್ರ ವಹಿಸುತ್ತದೆ ಎಂದು ನಮ್ಮ ಅಧ್ಯಯನವು ತೋರಿಸುತ್ತದೆ ಎಂದು ಸಂಶೋಧಕರು ಹೇಳಿದ್ದಾರೆ.

ಬಾಳೆಹೂವಿನಲ್ಲಿರುವ 'ಔಷಧೀಯ' ಗುಣ ತಿಳಿದ್ರೆ ಅಚ್ಚರಿಪಡ್ತೀರಾ...!

ಮಹಿಳೆಯರ ಸೌಂದರ್ಯ ಹೆಚ್ಚಿಸುವ ಹೂವು, ಆರೋಗ್ಯಕ್ಕೂ ಒಳ್ಳೆಯದು. ಉತ್ತಮ ಆರೋಗ್ಯಕ್ಕೆ ಈ ಹೂವುಗಳನ್ನು ತಿನ್ನಿ... ಆರೋಗ್ಯದಿಂದ ಇರುವುದನ್ನು ರೂಢಿಸಿಕೊಳ್ಳಿ. ಅಷ್ಟಕ್ಕೂ ಯಾವುದು ಈ ಹೂವು ಅಂತೀರಾ? ಬಾಳೆ ಹೂವು.

ಬಾಳೆ ಹೂವಿನಲ್ಲಿ ಪ್ರೋಟೀನ್, ಫಾಸ್ಫರಸ್, ಐರನ್, ಕಾಪರ್, ಪೊಟಾಷಿಯಮ್, ಕ್ಯಾಲ್ಶಿಯಮ್, ಕಾರ್ಬೋಹೈಡ್ರೇಟ್ ಗಳಿವೆ. ಇದರ ಸಾಂಬಾರು ಮಾಡಿಕೊಂಡು ತಿಂದರೆ ಸಾಕಷ್ಟು ಪ್ರಯೋಜನಗಳಿವೆ.

* ಬಾಳೆ ಹೂವಿನಲ್ಲಿರುವ ಇಥನಾಲ್ ಅಂಶ ಗಾಯವನ್ನು ಬೇಗ ಗುಣವಾಗುವಂತೆ ಮಾಡುತ್ತದೆ. ಹಾಗೂ ಇನ್ಫೆಕ್ಷನ್ ಕಡಿಮೆ ಮಾಡಲು ಸಹಾಯಕ.

* ಬಾಳೆ ಹೂವಿನಲ್ಲಿರುವ ಆಂಟಿ ಆಕ್ಸಿಡೆಂಟ್, ಕ್ಯಾನ್ಸರ್ ಗೆ ಕಾರಣವಾಗುವ ಕಲುಷಿತ ಅಂಶಗಳನ್ನು ತೊಲಗಿಸುತ್ತದೆ.

* ಬಾಳೆ ಹೂವು ರಕ್ತದಲ್ಲಿನ ಸಕ್ಕರೆ ಪ್ರಮಾಣವನ್ನು ನಿಯಂತ್ರಿಸುತ್ತದೆ ಮತ್ತು ಕಬ್ಬಿಣಾಂಶ ಹೆಚ್ಚಿರುವುದರಿಂದ ರಕ್ತಹೀನತೆಯನ್ನು ನಿಯಂತ್ರಿಸುತ್ತದೆ.

* ಬಾಳೆ ಹೂವುಗಳ ಸಾಂಬಾರನ್ನು ಉಪಯೋಗಿಸುವುದರಿಂದ ಮಹಿಳೆಯರ ಅನೇಕ ಋತುಬಾಧೆ ಸಮಸ್ಯೆ ನಿವಾರಣೆಯಾಗುತ್ತದೆ. ಹಾಗೂ ಎದೆ ಹಾಲು ಹೆಚ್ಚಾಗುತ್ತದೆ.

ದಿನವೂ ಮಾವಿನ ಹಣ್ಣು ತಿಂದ್ರೆ ತೂಕ ಹೆಚ್ಚಾಗತ್ತಾ?

ಮಾವಿನ ಹಣ್ಣಿನ ಸೀಸನ್ ಇದು, ಮ್ಯಾಂಗೋ ಕೇಕ್, ಐಸ್‌ಕ್ರೀಂ ಲಸ್ಸಿ.. ಇದೆಲ್ಲಾ ಬಿಡಿ, ಇಡೀ ಇಡೀ ಮಾವಿನಹಣ್ಣನ್ನೇ ತಿಂದುಬಿಡಬಹುದು. ಪ್ರತೀ ದಿನ ಮಾವಿನಹಣ್ಣನ್ನು ತಿಂದರೆ ತೂಕ ಹೆಚ್ಚಾಗುತ್ತದೆ ಅನ್ನೋ ಮಾತಿದೆ. ಇದು ನಿಜವಾ? ಖಂಡಿತಾ ಇಲ್ಲ, ಮಾವಿನಹಣ್ಣಿನಿಂದ ಯಾವ ತೂಕವೂ ಹೆಚ್ಚಾಗೋದಿಲ್ಲ. ತೂ ಹೆಚ್ಚಳ ನಿರ್ಧರಿತವಾಗೋದು ತಿನ್ನುವ ಕ್ಯಾಲರಿಗಳಿಂದ. ನಿಮ್ಮ ಡಯಟ್‌ನಲ್ಲಿ ಮಾವಿನ ಹಣ್ಣನ್ನು ಸೇರಿಸಿಕೊಂಡರೆ ತೂಕ ಇಳಿಕೆಯೂ ಸಾಧ್ಯವಿದೆ.

ಬೇವಿನ ಎಲೆ ಎಲ್ಲ ನೋವಿಗೆ ರಾಮಬಾಣ

ಪೂರ್ತಿ ದಿನ ಕೆಲಸ ಮಾಡುವುದ್

3 ದಶಕದಿಂದ ಅಭಿವೃದ್ಧಿ ಕಾಣದ ಭವನ

ಗುಳೇದಗುಡ್ಡ: ಕರ್ನಾಟಕ ಶೇಕ್ಸಪೀಯರ್ ಎಂದು ಗುರುತಿಸಿಕೊಂಡ, ಗುಳೇದಗುಡ್ಡ ಕರ್ಮಭೂಮಿಯಾಗಿಸಿಕೊಂಡಿದ್ದ ಕಂದಗಲ್ ಹನಮಂತರಾಯರು ರಂಗಭೂಮಿಯ ಸಾಧಕರಾಗಿದ್ದಾರೆ. ಅವರ ಹೆಸರಿನಲ್ಲಿ 33 ವರ್ಷ ಹಿಂದೆ ಅಡಿಗಲ್ಲು ಹಾಕಿ ಕಟ್ಟಡ ಆರಂಭಿಸಿದರೂ ಅದು ಇಂದಿನವರೆಗೂ ಪೂರ್ಣಗೊಳ್ಳದೇ ಇರುವುದರಿಂದ ಅನೈತಿಕ ಚಟುವಟಿಕೆಗಳ ತಾಣವಾಗಿದೆ.

ಗುಳೇದಗುಡ್ಡ ಜಿಲ್ಲೆಯಲ್ಲಿಯೇ ಸಾಂಸ್ಕೃತಿಕ ರಾಜಧಾನಿ ಎಂದು ಗುರುತಿಸಿಕೊಂಡಿದೆ. ವೃತ್ತಿರಂಗಭೂಮಿ ಕಲಾವಿದರು, ಮಠಗಳು, ಗುಳೇದಗುಡ್ಡದ ಕಣ ದೇಶಕ್ಕೆ ತಮ್ಮದೇಯಾದ ಕೊಡುಗೆ ನೀಡಿವೆ. ಆದರೂ ಕೂಡಾ ಇಲ್ಲಿ ಸುಸಜ್ಜಿತ ಸಾಂಸ್ಕೃತಿಕ ಭವನ ನಿರ್ಮಾಣವಾಗದೇ ಇರುವುದು ದುರಂತ.

ಆರಂಭದಲ್ಲಿ ಕಟ್ಟಿದ ಕಟ್ಟಡ ಪ್ರತಿ ವರ್ಷ ಆದ ಮಳೆಯಿಂದ ನೆನೆದು ಶಿಥಿಲವಾಗಿದೆ. ಗುಳೇದಗುಡ್ಡದಲ್ಲಿ 30ಕ್ಕೂ ಹೆಚ್ಚು ಹವ್ಯಾಸಿ ನಾಟಕ ತಂಡಗಳಿವೆ. ವಾರ್ಷಿಕವಾಗಿ ಹಲವು ಸಾಂಸ್ಕೃತಿಕ ಕಾರ್ಯಕ್ರಮ ಜರುಗುವುದಕ್ಕೆ ಈ ರಂಗಮಂದಿರ ಅನುಕೂಲವಾಗಲಿದೆ.

ಹಿನ್ನಲೆ: 1985ರಲ್ಲಿ ರಾಮಕೃಷ್ಣ ಹೆಗಡೆಯವರು ಮುಖ್ಯಮಂತ್ರಿಯಾದ ಸಂದರ್ಭದಲ್ಲಿ ಜೀವರಾಜ್ ಆಳ್ವ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾಗಿದ್ದ ಅವಧಿಯಲ್ಲಿ ಬಯಲು ರಂಗಮಂದಿರ ನಿರ್ಮಾಣ ಮಾಡಬೇಕೆಂಬ ಸಂಕಲ್ಪದೊಂದಿಗೆ 5 ಲಕ್ಷ ಅನುದಾನದೊಂದಿಗೆ ಕಟ್ಟಡ ಆರಂಭವಾಯಿತು. ನಂತರದ ದಿನಗಳಲ್ಲಿ ಕಟ್ಟಡ ಕಾಮಗಾರಿ ಅನುದಾನದ ಕೊರತೆಯಿಂದ ಅರ್ದ–ಕ್ಕೆ ನಿಂತಿತು. ಸುಧೀರ್ಘ ಸಮಯದ ನಂತರ 2012ರಲ್ಲಿ ಗೋವಿಂದ ಕಾರಜೋಳ ಅವರು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ 10 ಲಕ್ಷ ಅನುದಾನ ಬಿಡುಗಡೆಗೊಳಿಸಿದರು. ಅದರಲ್ಲೂ ಪೂರ್ಣಗೊಳ್ಳದೆ ಜಾಲಿಯ ಕಂಟಿ ಬೆಳೆದು ನಿಂತಿತ್ತು ಮತ್ತೆ ಪಟ್ಟಣದ ರಂಗಾಸಕ್ತರ ಹೋರಾಟದಿಂದ ಆಗಿನ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವೆಯಾಗಿದ್ದ ಉಮಾಶ್ರೀ ಅವರಿಗೆ ಮನವಿ ಮಾಡಿದಾಗ ಮತ್ತೆ 25 ಲಕ್ಷ ಬಿಡುಗಡೆಯಾಗಿ ಲ್ಯಾಂಡ್ ಆರ್ಮಿಯಿಂದ ಕಾಮಗಾರಿ 2022ರಲ್ಲಿ ಆರಂಭವಾದರೂ ಅಂದಾಜು 5 ಲಕ್ಷದಷ್ಟು ಕೆಲಸ ಮಾಡಿ ಮತ್ತೇ ಹಾಗೇಯೆ ಬಿಟ್ಟು ಹೋಗಿದ್ದಾರೆ. ಪುರಸಭೆಯವರು ರಂಗಮಂದಿರದ ಅನುದಾನದ ಮಾಹಿತಿ ಇಲ್ಲ ಎಂದು ಹೇಳಿದರೆ ಬಾಗಲಕೋಟೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರಣಕುಮಾರ ಜೈನಾಪುರ 'ಪುರಸಭೆಯಲ್ಲಿ ರಂಗಮಂದಿರ ನಿರ್ಮಾಣಕ್ಕಾಗಿ 1 ಕೋಟಿ ಹಣ ತೆಗಿದಿರಿಸಲಾಗಿದೆ' ಎಂದು ಹೇಳುತ್ತಾರೆ. ಅಧಿಕಾರಿಗಳ ಈ ದ್ವಂದ್ವ ನಿಲುವಿನಿಂದ ಕಲಾವಿದರ ಪಾಡು ಹೇಳತೀರದಾಗಿದೆ. 'ಪಟ್ಟಣದ ಪುರಸಭೆಯ ವ್ಯಾಪ್ತಿಯಲ್ಲಿರುವ ರಂಗಮಂದಿರ ಕುಡುಕರ ತಾಣವಾಗಿದೆ' ಕಲಾವಿದ ಶ್ರೀಕಾಂತ ಹುನಗುಂದ ಬೇಸರ ವ್ಯಕ್ತಪಡಿಸುತ್ತಾರೆ. ಕರವೇ ಅಧ್ಯಕ್ಷ ರವಿ ಅಂಗಡಿ, ಕಸಾಪ ಜಿಲ್ಲಾ ಕೋಶಾಧ್ಯಕ್ಷ ಸಿ.ಎಂ. ಜೋಶಿ, 'ಸರ್ಕಾರ ನೀಡಿದ ಲಕ್ಷಾಂತರ ಹಣವನ್ನು ಇಲ್ಲಿ ಪೋಲು ಮಾಡಲಾಗಿದೆ. ಉತ್ತಮ ಉದ್ದೇಶದಿಂದ ನಿರ್ಮಾಣವಾಗುವ ಇಂತಹ ಸಾಂಸ್ಕೃತಿಕ ಭವನಗಳನ್ನು ಜತನದಿಂದ ಕಾಪಾಡಿಕೊಳ್ಳುವುದು ನಮ್ಮ ಜವಾಬ್ದಾರಿ. ಆದರೆ ಸಂಬಂಧಿಸಿದ ಅಧಿಕಾರಿ, ಜನಪ್ರತಿನಿಧಿಗಳ ಸಾಂಸ್ಕೃತಿಕ ಪ್ರಜ್ಞೆಯ ಕೊರತೆಯಿಂದ ರಂಗಮಂದಿರ ಹಾಳಾಗಿ ಹೋಗಿದೆ.

ಘಟಪ್ರಭಾ ನದಿಗೆ ನೀರು ಹರಿಸಲು ಆಗ್ರಹ

ಮುಧೋಳ: ಕಳೆದ 25 ದಿನಗಳಿಂದ ಘಟಪ್ರಭಾ ನದಿ ಬರಿದಾಗಿರುವುದರಿಂದ ಘಟಪ್ರಭಾ ನದಿ ಪಾತ್ರದ ಗ್ರಾಮಗಳಲ್ಲಿ ನೀರಿನ ಕೊರತೆ ಉಂಟಾಗಿದೆ. ಶೀಘ್ರ ನದಿಗೆ ನೀರು ಹರಿಸಬೇಕು ಎಂದು ಆಗ್ರಹಿಸಿ ಕಬ್ಬು ಬೆಳೆಗಾರ ಸಂಘಟನೆ ಸದಸ್ಯರು ತಹಶೀಲ್ದಾರ್ ಅವರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ತಾಲ್ಲೂಕಿನ ರೈತರ ಜಮೀನುಗಳ ಪಂಪ್‌ಸೆಟ್ ಬಂದ್ ಆಗಿವೆ. ಜನ, ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆ–ಯಾಗಿದೆ. ಬೇಸಿಗೆ ಆರಂಭಕ್ಕೂ ಮುನ್ನವೇ ಹೀಗಾದರೆ ಹೇಗೆ ಎಂಬ ಆತಂಕ ಜನರನ್ನು ಕಾಡುತ್ತಿದೆ.

'ರೈತರ ನೀರಾವರಿ ಜಮೀನುಗಳಿಗೆ ನೀರಿಲ್ಲ. ಜನ ಸಾಮಾನ್ಯರಿಗೆ ಕುಡಿಯುವ ನೀರಿನ ತೊಂದರೆಯಾಗಿದೆ. ದನ ಕರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಗಂಭೀರ ಸ್ವರೂಪ ತಾಳಿದೆ. ಈ ಸಂದರ್ಣದಲ್ಲಿ ತಾಲ್ಲೂಕು ಆಡಳಿತವಾಗಲಿ, ಜಿಲ್ಲಾಡಳಿತವಾಗಲಿ ತಾಲ್ಲೂಕ ಆಡಳಿತವಾಗಲಿ, ಜಿಲ್ಲಾಡಳಿತ ಗಮನ ಹರಿಸುತ್ತಿಲ್ಲ. ಡಿ.20ರೊಳಗೆ ನೀರು ಹರಿಸದಿದ್ದರೆ ಉಗ್ರ ಹೋರಾಟ ಅನಿವಾರ್ಯವಾಗಲಿದೆ ಎಂದು ಸಂಘಟನೆಯ ಜಿಲ್ಲಾ ಕಾರ್ಯದರ್ಶಿ ನಾಗೇಶ ಸೊರಗಾಂವಿ ಹೇಳಿದರು.

ಮುಖಂಡ ದುಂಡಪ್ಪ ಯರಗಟ್ಟಿ ಮಾತನಾಡಿ, ಮಳೆ ಇಲ್ಲದೇ ಕೊಳವೆಬಾವಿಗಳಲ್ಲಿ ನೀರು ಹೋಗುತ್ತಿದೆ. ಕುಡಿಯುವ ನೀರಿಗೂ ತೊಂದರೆಯಾಗಿದೆ. ನದಿಗೆ ನೀರು ಹರಿಸಿದರೆ ಅಂತರ್ಜಲದ ಮಟ್ಟ ಅಧಿಕವಾಗಿ ಕುಸಿದು ಬೋರವೆಲ್ ಇರುವ ರೈತರು ಹಾಗೂ ತೋಟದಲ್ಲಿ ವಸತಿ ಇರುವ ಕುಟುಂಬಗಳಿಗೆ ತೀವ್ರ ತೆ–ಂದರೆಯಾಗುತ್ತಿದೆ.

ಈ ಕೂಡಲೇ ಹಿಡಕಲ್ ಜಲಾಶಯದಿಂದ ನೀರು ಹರಿಸಬೇಕು ಎಂದು ಆಗ್ರಹಿಸಿದರು.

ತಹಶೀಲ್ದಾರ್ ವಿನೋದ ಹತ್ತಳ್ಳಿ ಹಾಗೂ ನೀರಾವರಿ ಇಲಾಖೆ ಅಧಿಕಾರಿ ಮಾರಡ್ಡಿ ಮನವಿ ಸ್ವೀಕರಿಸಿ ಸರ್ಕಾರದ ಗಮನಕ್ಕೆ ತರುವುದಾಗಿ ಭರವಸೆ ನೀಡಿದರು. ಮಹೇಶಗೌಡ ಪಾಟೀಲ, ಸುರೇಶ ಅಕ್ಕಿಮರಡಿ, ಮುದ್ದೇಶ ಗಾಯಕವಾಡ ಮುಂತಾದವರು ಭಾಗವಹಿಸಿದ್ದರು.

ಬಾರದ ವೇತನ: ಅಗ್ನಿಶಾಮಕ ಸಿಬ್ಬಂದಿ ಪರದಾಟ

ತೋರಣಗಲ್ಲು: ಸಮೀಪದ ಬಳ್ಳಾರಿ ಶಾಖೋತ್ಪನ್ನ ವಿದ್ಯುತ್ ಕೇಂದ್ರದ ಆವರಣದಲ್ಲಿರುವ ಅಗ್ನಿಶಾಮಕ ದಳದ ಗುತ್ತಿಗೆ ಆಧಾರಿತ ನೌಕರರಿಗೆ ಏಜೆನ್ಸಿಯಿಂದ ಸಕಾಲಕ್ಕೆ ವೇತನ ಪಾವತಿ ಆಗುತ್ತಿಲ್ಲ. ನೌಕರರು ಹಲವಾರು ತಿಂಗಳುಗಳಿಂದ ವೇತನವಿಲ್ಲದೆ ಪರದಾಡುತ್ತಿದ್ದಾರೆ. ಬಿಟಿಪಿಎಸ್‌ನ ಅಗ್ನಿಶಾಮಕ ದಳದ ಕೇಂದ್ರದಲ್ಲಿ ಕುಡತಿನಿ ಸೇರಿದಂತೆ ಸುತ್ತಲಿನ ಗ್ರಾಮಗಳ ಒಟ್ಟು 41 ಜನ ಗುತ್ತಿಗೆ ನೌಕರರು ಹಲವಾರು ವರ್ಷಗಳಿಂದ 12 ಸಾವಿರ ಕಡಿಮೆ ವೇತನಕ್ಕೆ ಸೇವೆ ಸಲ್ಲಿಸುತ್ತಿದ್ದಾರೆ. ಬಿಟಿಪಿಎಸ್ ಆಡಳಿತ ಮಂಡಳಿ, ಟೆಂಡರ್ ಪಡೆದ ಏಜೆನ್ಸಿಯ ಆಡಳಿತತ್ಮಾಕ ತಾಂತ್ರಿಕ ಸಮಸ್ಯೆಯಿಂದ ಪ್ರತಿ ತಿಂಗಳು ವೇತನ ವಿಳಂಬವಾಗುತ್ತಿದ್ದು, ಗುತ್ತಿಗೆ ಆಧಾರದ ನೌಕರರು ವೇತನಕ್ಕಾಗಿ ಪರಿತಪಿಸುವಂತಾಗಿದೆ. 'ಬಿಟಿಪಿಎಸ್‌ನಿಂದ 2021ರ ಕನಿಷ್ಠ ವೇತನದ ಅನುಸಾರ ಏಜೆನ್ಸಿಗೆ ಹಣ ಪಾವತಿ ಮಾಡಿದರೂ ಸಹ ಏಜೆನ್ಸಿಯವರು ಪ್ರಸ್ತುತ ಮೂರು ತಿಂಗಳಿಂದ ನಮಗೆ ವೇತನ ನೀಡಿಲ್ಲ. ಈ ವೇತನಕ್ಕಾಗಿ ಪ್ರತಿ ತಿಂಗಳು ಅಧಿಕಾರಿಗಳ ಕಚೇರಿಗೆ ಅಲೆದು, ದುಂಬಾಲು ಬಿದ್ದು ವೇತನವನ್ನು ನಾವೇ ಮಾಡಿಸಿಕೊಳ್ಳುವ ಕೆಟ್ಟ ಪರಿಸ್ಥಿತಿ ನಿರ್ಮಾಣವಾಗಿದೆ' ಎಂದು ಅಗ್ನಿಶಾಮಕ ದಳದ ಗುತ್ತಿಗೆ ನೌಕರರು ಆರೋಪಿಸಿದ್ದಾರೆ. ಬಿಟಿಪಿಎಸ್ ನ ಆಡಳಿತವು 2023ರ ನೂತನ ಕನಿಷ್ಠ ವೇತನ ಪ್ರಕಾರ ಖಾಸಗಿ ಏಜೆನ್ಸಿಗೆ ಹೆಚ್ಚಿನ ಹಣ ಬಿಡುಗಡೆ ಮಾಡಬೇಕು. ಆದರೆ 2021ರ ಹಳೆಯ ವೇತನದ ಅನುಸಾರ ಕಡಿಮೆ ಹಣವನ್ನು ಏಜೆನ್ಸಿಗೆ ಬಿಡುಗಡೆ ಮಾಡುವುದರಿಂದ ಗುತ್ತಿಗೆ ನೌಕರರಿಗೆ ಸಕಾಲಕ್ಕೆ ವೇತನ ನೀಡಲು ಆಗುತ್ತಿಲ್ಲ ಎನ್ನುವುದು ಏಜೆನ್ಸಿಗಳ ವಾದವಾಗಿದೆ.

ಕಡ್ಡಾಯವಾಗಿ ಪ್ರತಿ ತಿಂಗಳ ವೇತನ ನೀಡಬೇಕು. ಇಎಸ್‌ಐ ಕಾರ್ಡ್ ಹಾಗೂ ಕನಿಷ್ಠ ವೇತನ ಕಾಯ್ದೆಯ ಅನುಸಾರ ಸಕಾಲಕ್ಕೆ ಪೂರ್ಣ ಪ್ರಮಾಣದ ವೇತನ ನೀಡುಬೇಕು ಎಂದು ಗುತ್ತಿಗೆ ನೌಕರರ ಬೇಡಿಕೆಗಳಾಗಿವೆ. 'ಗುತ್ತಿಗೆ ನೌಕರರಿಗೆ ಕನಿಷ್ಠ ವೇತನದ ಅನುಸಾರ ಸಕಾಲಕ್ಕೆ ವೇತನ ಪಾವತಿ ಮಾಡುವಂತೆ ಹಲವಾರು ಬಾರಿ ಬಿಟಿಪಿಎಸ್ ನ ಆಡಳಿತ ಮಂಡಳಿಗೆ ಮನವಿ ಮಾಡಿದರೂ ಪ್ರಯೋಜನವಾಗಿಲ್ಲ. ಬಡ ನೌಕರರ ಕುಟುಂಬ ಜೀವನವು ಬಹಳ ಕಷ್ಟಕರವಾಗಿದ್ದು, ಶೀಘ್ರವಾಗಿ ವೇತನ ಪಾವತಿ ಮಾಡಬೇಕು' ಎಂದು ಬಿಟಿಪಿಎಸ್ ಗುತ್ತಿಗೆ ಆಧಾರದ ನೌಕರರ ಸಂಘದ ಅಧ್ಯಕ್ಷ ಎಂ.ತಿಪ್ಪೇಸ್ವಾಮಿ ಒತ್ತಾಯಿಸಿದರು.

'ಬಿಟಿಪಿಎಸ್ ಅಧಿಕಾರಿಗಳು ನೂತನ ಕನಿಷ್ಠ ವೇತನ ಪ್ರಕಾರ ನಮ್ಮ ಏಜೆನ್ಸಿಗೆ ಹೆಚ್ಚಿನ ಹಣ ಬಿಡುಗಡೆ ಮಾಡದೇ ಹಳೆಯ ವೇತನದ ಅನುಸಾರ ಕಡಿಮೆ ಹಣ ನೀಡುವುದರಿಂದ ನಮಗೆ ಬಹಳ ನಷ್ಟವಾಗುತ್ತಿದ್ದು, ಗುತ್ತಿಗೆ ನೌಕರರಿಗೆ ವೇತನ ನೀಡಲು ಆಗುತ್ತಿಲ್ಲ' ಎಂದು ಪ್ರೋಪೆಷನಲ್ ಸೆಕ್ಯೂರಿಟಿ ಸರ್ವಿಸ್ಸ ಮೇಲ್ವಿಚಾರಕ ಸಂತೋಷ ಹೇಳಿದರು.

ಮೆಣಸಿನಕಾಯಿಗೆ ರೋಗ, ಕಳ್ಳರ ಕಾಟ: ಆತಂಕ

ಗಜೇಂದ್ರಗಡ: ಬರಗಾಲ ಆವರಿಸಿರುವುದರಿಂದ ತಾಲ್ಲೂಕಿನಲ್ಲಿ ಮುಂಗಾರು ಬೆಳೆಗಳೆಲ್ಲ ಹಾಳಾಗಿವೆ. ಸದ್ಯ ಹಿಂಗಾರು ಬೆಳೆಗಳಾದ ಕಡಲೆ, ಜೋಳ, ಮೆಣಸಿನಕಾಯಿ ಪೈಕಿ ಮೆಣಸಿನಕಾಯಿ ಬೆಳೆ ಕೈ ಹಿಡಿಯುತ್ತದೆಂಬ ಆಶಾಭಾವ ಇದೆ. ಆದರೆ ಈಚೆಗೆ ಮೆಣಸಿನಕಾಯಿಗೆ ವಿಪರೀತ ರೋಗ ಬಾಧೆ ಜೊತೆಗೆ ಕಳ್ಳರ ಕಾಟ ಹೆಚ್ಚುತ್ತಿದ್ದು, ರೈತರನ್ನು ಆತಂಕಕ್ಕೀಡು ಮಾಡಿದೆ.

ಗಜೇಂದ್ರಗಡ ತಾಲ್ಲೂಕಿನಲ್ಲಿ 2,224 ಹೆಕ್ಟೇರ್ ಮೆಣಸಿನಕಾಯಿ ಬೆಳೆ ಬಿತ್ತನೆಯಾಗಿದೆ. ಈಗಾಗಲೇ ಮುಂಗಾರು ಹಂಗಾಮಿನಲ್ಲಿ ನಷ್ಟ ಅನುಭವಿಸಿರುವ ರೈತರು ಹಿಂಗಾರಿಯಲ್ಲಿ ಆರ್ಥಿಕ ನಷ್ಟ ಸರಿದೂಗಿಸಿಕೊಳ್ಳುವ ನಿರೀಕ್ಷೆಯಿಂದ ಕಳೆದೆರಡು ವರ್ಷ ಉತ್ತಮ ಇಳುವರಿ ಹಾಗೂ ಬೆಲೆ ಸಿಕ್ಕಿದ್ದ ಮೆಣಸಿನಕಾಯಿ ಬೆಳೆದಿದ್ದರು. ಆದರೆ ಬದಲಾದ ವಾತಾವರಣ ಹಾಗೂ ತೇವಾಂಶ ಕೊರತೆಯಿಂದ ಬೆಳೆಗೆ ಬೂದು ರೋಗ, ಎಲೆ ಮುರುಟು ರೋಗ ಸೇರಿದಂತೆ ಹಲವು ಕೀಟ ಬಾಧೆ ಕಂಡು ಬಂದಿದೆ. ಇಳುವರಿಯಲ್ಲಿ ತೀವ್ರ ಕುಸಿತ ಉಂಟಾಗುವ ಸಾಧ್ಯತೆಗಳಿವೆ. ಇಂತಹ ಸಂಕಷ್ಟದ ಸಂದರ್ಭದಲ್ಲಿ ಅಲ್ಪ ಸ್ವಲ್ಪ ಪ್ರಮಾಣದಲ್ಲಿ ಬಂದ ಮೆಣಸಿನಕಾಯಿ ಫಸಲಿಗೆ ಈಗ ಕಳ್ಳರ ಕಾಟ ಹೆಚ್ಚಿದೆ. ರೈತರು ಹೊಲದಲ್ಲಿ ಬೆಳೆ ಕಾಯುವಂತಾಗಿದೆ.

ಎರಿ (ಕಪ್ಪು) ಹಾಗೂ ಮಸಾರಿ ಭೂಮಿಗಳಲ್ಲಿ ಬಿತ್ತನೆಯಾಗಿರುವ ಮೆಣಸಿನಕಾಯಿ ಬೆಳೆಯನ್ನು ಆರಂಭದಲ್ಲಿ ಕೊಳವೆ ಬಾವಿ, ಕೃಷಿ ಹೊಂಡ ಹಾಗೂ ಟ್ಯಾಂಕರ್ ನೀರು ಹಾಯಿಸಿ ಉಳಿಸಿಕೊಂಡಿರುವ ರೈತರು ವಾತಾವರಣ ಬದಲಾವಣೆಯಿಂದ ಉಂಟಾದ ಬೂದು ರೋಗ, ಎಲೆ ಮುರುಟು ರೋಗ ನಿಯಂತ್ರಣಕ್ಕೆ ಕೀಟನಾಶಕ ಸಿಂಪಡಿಸಲು ಸಾಕಷ್ಟು ಹಣ ಖರ್ಚು ಮಾಡಿದ್ದಾರೆ. ಹಲವು ಸಂಕಷ್ಟಗಳ ನಡುವೆ ಬಂದ ಅಲ್ಪ ಪ್ರಮಾಣದ ಮೆಣಸಿನಕಾಯಿ ಫಸಲಿಗೆ ಸದ್ಯ ಕಳ್ಳರ ಕಾಟ ಹೆಚ್ಚಾಗಿದೆ. ಕಳ್ಳರು ಯಾರೂ ಇಲ್ಲದಿರುವುದನ್ನು ನೋಡಿ ಹೊಲದಲ್ಲಿಯ 'ಕೆಂಪು ಬಂಗಾರ' ಕದ್ದೊಯ್ಯುತ್ತಿದ್ದಾರೆ. ಹೀಗಾಗಿ ರೈತರು ಸರದಿಯಂತೆ ಹಗಲು ಮತ್ತು ರಾತ್ರಿ ಹೊಲದಲ್ಲಿ ಕಾವಲು ಕಾಯಲು ಹೋಗುತ್ತಿದ್ದಾರೆ. 'ನಮ್ಮ 2 ಎಕರೆ ಜಮೀನಿನಲ್ಲಿ ಬೆಳೆದಿದ್ದ ಮೆಣಸಿನಕಾಯಿ ಫಸಲು ಇನ್ನೇನು ಕೈಗೆ ಬರುತ್ತದೆ ಮುಂಗಾರಿನಲ್ಲಾದ ನಷ್ಟ ಮೆಣಸಿನಕಾಯಿ ಸರಿದೂಗಿಸುತ್ತದೆ ಎಂಬ ನಿರೀಕ್ಷೆಯಲ್ಲಿದ್ದೆವು. ಆದರೆ ಈಚೆಗೆ ಕಳ್ಳರು ಹೊಲದಲ್ಲಿದ್ದ ಸುಮಾರು 70–80 ಕೆ.ಜಿ.ಗಳಷ್ಟು ಮೆಣಸಿನಕಾಯಿ ಹರಿದುಕೊಂಡು ಹೋಗಿದ್ದಾರೆ. ಬಂದಷ್ಟು ಬರಲೆಂದು ಮೆಣಸಿನಕಾಯಿ ಮಾಗದಿದ್ದರೂ ಹರಿದು ತಂದು ಮನೆಯಲ್ಲಿ ಒಣಗಿಸುತ್ತಿದ್ದೇವೆ' ಎಂದು ರಾಜೂರ ಗ್ರಾಮದ ಯಮನೂರಸಾಬ ಮುಜಾವರ ಅಳಲು ತೋಡಿಕೊಂಡರು.

ಕೂಲಿ ಹಣ ಪಾವತಿಗೆ ಆಗ್ರಹಿಸಿ ಪ್ರಧಾನಿಗೆ ಪತ್ರ

ಹರಪನಹಳ್ಳಿ: ಉದ್ಯೋಗ ಖಾತ್ರಿ ಯೋಜನೆಯಡಿ ಕೆಲಸ ಮಾಡಿ ಮೂರು ತಿಂಗಳಿನಿಂದ ಬಾಕಿ ಉಳಿದಿರುವ ಕೂಲಿ ಹಣವನ್ನು ಪಾವತಿ ಮಾಡಬೇಕು ಎಂದು ಆಗ್ರಹಿಸಿ ಗ್ರಾಮೀಣ ಕೂಲಿ ಕಾರ್ಮಿಕರ ಸಂಘಟನೆಯಿಂದ ವಿವಿಧ ಗ್ರಾಮಗಳಲ್ಲಿ ಉದ್ಯೋಗ ಖಾತ್ರಿ ಕಾರ್ಮಿಕರು ಶುಕ್ರವಾರ ಪತ್ರ ಚಳವಳಿ ನಡೆಸಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ಕನ್ನಡದಲ್ಲಿ ಅಂಚೆ ಪತ್ರ ಬರೆದಿರುವ ಕಾರ್ಮಿಕರು ಮೂರು ತಿಂಗಳ ಬಾಕಿ ಹಣ ಪಾವತಿಸುವಂತೆ ಒತ್ತಾಯಿಸಿದ್ದಾರೆ.

'ತಾಲ್ಲೂಕು ಬರಪೀಡಿತ ಪ್ರದೇಶವೆಂದು ಸರ್ಕಾರ ಘೋಷಣೆ ಮಾಡಿದೆ. ರೈತರು ಬೆಳೆ ನಷ್ಟ ಅನುಭವಿಸಿ ಪರಿತಪಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಉದ್ಯೋಗ ಖಾತ್ರಿ ನೆರವು ನೀಡುವ ಭರವಸೆಯಿಂದ ಕೂಲಿ ಕೆಲಸ ಮಾಡಿದ್ದಾರೆ. ಆದರೆ 3 ತಿಂಗಳಾದರು ಕೂಲಿ ಹಣ ಪಾವತಿಯಾಗದ ಪರಿಣಾಮ ಕುಟುಂಬಗಳ ನಿರ್ವಹಣೆ ಕಷ್ಟವಾಗಿದೆ' ಎಂದು ಕಾರ್ಮಿಕರು ಅಳಲು ತೋಡಿಕೊಂಡಿದ್ದಾ–ರೆ. ತಾಲ್ಲೂಕಿನ ತೊಗರಿಕಟ್ಟೆ, ಗೋವೆರಹಳ್ಳಿ, ಅಲರಮರಸಿಕೆರೆ, ಯಡಿಹಳ್ಳಿ, ಬಿಕ್ಕಿಕಟ್ಟಿ, ಕುಂಚೂರು, ಅರಸನಾಳು, ಕುಂಚೂರು, ನಿಟ್ಟೂರು, ತಾವರಗುಂದಿಯ ನೂರಾರು ಕಾರ್ಮಿಕರು 500ಕ್ಕೂ ಅಧಿಕ ಅಂಚೆಪತ್ರಗಳನ್ನು ಅಂಚೆಪೆಟ್ಟಿಗೆಗೆ ಹಾಕುವ ಮೂಲಕ ಬರಗಾಲ ಇರುವ ಕಾರಣ ಉದ್ಯೋಗ ಖಾತ್ರಿಯಲ್ಲಿ ಹೆಚ್ಚುವರಿ 50 ಮಾನವ ದಿನಗಳನ್ನು ನೀಡಬೇಕು ಎಂದು ಆಗ್ರಹಿಸಿದ್ದಾರೆ.

ಕಾರ್ಮಿಕ ಮುಖಂಡರಾದ ಭಾಗ್ಯ, ಶೃತಿ, ರಮೇಶ, ಸುನಿತ, ನಾಗಮ್ಮ, ಗೀತಾ, ಕಾವ್ಯ, ಇಂದ್ರಮ್ಮ, ಮಂಗಳ, ಶೋಭಾ, ಈರಪ್ಪ ನೇತೃತ್ವವಹಿಸಿದ್ದರು.

20 ದಿನಗಳಿಂದ ನೀರಿನ ಸಮಸ್ಯೆ: ಮಹಿಳೆಯರಿಂದ ಪ್ರತಿಭಟನೆ

ಕುಡತಿನಿ (ತೋರಣಗಲ್ಲು): ಪಟ್ಟಣದ 19ನೇ ವಾರ್ಡ್‌ನಲ್ಲಿ ಸುಮಾರು 20 ದಿನಗಳಿಂದ ನೀರಿನ ಸಮಸ್ಯೆಯುಂಟಾಗಿದ್ದು ಪಟ್ಟಣ ಪಂಚಾಯಿತಿ ಅಧಿಕಾರಿಗಳು ನೀರಿನ ಸಮಸ್ಯೆ ನಿವಾರಿಸುವಲ್ಲಿ ವಿಫಲರಾಗಿದ್ದಾರೆ ಎಂದು ಆರೋಪಿಸಿ ವಾರ್ಡ್ನ ನಿವಾಸಿಗಳು ಖಾಲಿ ಬಿಂದಿಗೆಗಳನ್ನು ಹಿಡಿದು ಶುಕ್ರವಾರ ಪಂಚಾಯಿತಿಯ ಆವರಣದಲ್ಲಿ ಕೆಲ ಕಾಲ ಪ್ರತಿಭಟನೆ ನಡೆಸಿದರು.

19ನೇ ವಾರ್ಡ್ನ ನಿವಾಸಿ ಕಾಳಮ್ಮ ಮಾತನಾಡಿ, '19ನೇ ವಾರ್ಡ್ನ ಅಂಜಿನಪ್ಪ ಪ್ಲಾಟ್ನಲ್ಲಿ ಸುಮಾರು 20 ದಿನಗಳಿಂದ ನೀರಿನ ಸಮಸ್ಯೆ ಉಂಟಾಗಿದ್ದು, ನೀರಿನ ಸಮಸ್ಯೆ ನಿವಾರಿಸುವಂತೆ ಹಲವಾರು ಬಾರಿ ಪಂಚಾತಿಯಿಯ ಅಧಿಕಾರಿಗಳಿಗೆ ಮನವಿ ಮಾಡಿದರೂ ಪ್ರಯೋಜನವಾಗಿಲ್ಲ. ಮಳೆಯ ಕೊರತೆಯಿಂದ ವಾರ್ಡ್ನ ಕೊಳವೆ ಬಾವಿಗಳಲ್ಲಿ ಬತ್ತಿಹೋಗಿದ್ದು ನೀರಿನ ದೊಡ್ಡ ಸಮಸ್ಯೆಯಾಗಿದ್ದು, ಪಂಚಾಯಿತಿಯವರು ಶೀಘ್ರವಾಗಿ ನೀರಿನ ಸಮಸ್ಯೆ ನಿವಾರಿಸಬೇಕು' ಎಂದು ಒತ್ತಾಯಿಸಿದರು.

'ಕುಡತಿನಿಯ 5 ಮತ್ತು 6ನೇ ವಾರ್ಡ್ಗಳಿಗೆ ಪಂಚಾಯಿತಿಯವರು 8 ದಿನಕ್ಕೊಮ್ಮೆ ನೀರು ಬಿಡುತ್ತಿದ್ದು, ಎರಡು ವಾರ್ಡ್ಗಳ ಜನರು ನಿತ್ಯ ನೀರಿಗಾಗಿ ಪರದಾಡುತ್ತಿದ್ದಾರೆ. ಈ ಎರಡು ವಾರ್ಡ್ಗಳು ಎತ್ತರದ, ಇಕ್ಕಟ್ಟಾದ ಪ್ರದೇಶಲ್ಲಿರುವುದರಿಂದ ನೀರಿನ ಸಂಗ್ರಹದ ತೊಟ್ಟಿಗಳು ಇಲ್ಲ ನಿತ್ಯ ನೀರನ್ನು ಬೀಡಬೇಕು' ಎಂದು 5ನೇ ವಾರ್ಡ್ನ ಪಟ್ಟಣ ಪಂಚಾಯಿತಿ ಸದಸ್ಯ ಕೆ.ಎಂ.ಹಾಲಪ್ಪ ಹೇಳಿದರು.

19ನೇ ವಾರ್ಡ್ನಲ್ಲಿನ ನೀರಿನ ಸಮಸ್ಯೆಯನ್ನು ಶೀಘ್ರವಾಗಿ ನಿವಾರಿಸಲಾಗುವ

ಬಾಲಕಿಯರ ಸರಕಾರಿ ಬಾಲಮಂದಿರ ಕಟ್ಟಡದ ಉದ್ಘಾಟನೆ

ಗದಗ: ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ವತಿಯಿಂದ ಡಿಸೆಂಬರ್ 17 ರಂದು ಬೆ 10.45 ಗಂಟೆಗೆ ನಗರದ ಸಂಭಾಪುರ ರೋಡ ನ ಬಾಲಕಿಯರ ಸರಕಾರಿ ಬಾಲಮಂದಿರದ ಕಟ್ಟಡದ ಉದ್ಘಾಟನೆ ಜರುಗಲಿದೆ.

ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಅವರು ಕಾರ್ಯಕ್ರಮ ಉದ್ಘಾಟಿಸುವರು. ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವರು ಹಾಗೂ ಉಡುಪಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀಮತಿ ಲಕ್ಷ್ಮೀ ಹೆಬ್ಬಾಳಕರ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ.ಗದ್ದಿಗೌಡರ, ವಿಧಾನಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ರೋಣ ಶಾಸಕ ಜಿ.ಎಸ್.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಗದಗ ಬೆಟಗೇರಿ ನಗರಸಭೆ ಅಧ್ಯಕ್ಷೆ ಶ್ರೀಮತಿ ಉಷಾ ದಾಸರ, ನಗರಸಭೆ ಉಪಾಧ್ಯಕ್ಷೆ ಶ್ರೀಮತಿ ಸುನಂದಾ ಬಾಕಳೆ ಆಗಮಿಸುವರು.

ಕಿತ್ತೂರು ಠಾಣೆಯ ಸಿಪಿಐ ಅಮಾನತು

ಬೆಳಗಾವಿ: ಸೆಪ್ಟೆಂಬರ ನಲ್ಲಿ ಚನ್ನಮ್ಮನ ಕಿತ್ತೂರು ತಾಲೂಕಿನ ತಿಗಡೊಳ್ಳಿ ಗ್ರಾಮದಲ್ಲಿ ರೌಡಿ ಶಿಟರ್ ವಿಜಯ ಆರೇರ ಕೊಲೆ ಪ್ರಕರಣವೊಂದಕ್ಕೆ ಸಂಬಂಧಿಸಿದಂತೆ ಕಿತ್ತೂರು ಪೊಲೀಸ್ ಠಾಣೆ ಸಿಪಿಐ ಎಂ.ವಿ. ಹೊಸಪೇಟಿ ಅವರನ್ನು ಅಮಾನತುಗೊಳಿಸಲಾಗಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಸ್ವತ ಹೈಕೋರ್ಟ್ ಅವಲೋಕನ ನಡೆಸಿತ್ತು. ಈ ಹಿನ್ನಲೆಯಲ್ಲಿ ಅಮಾನತು ಮಾಡಿ ಆದೇಶ ಹೊರಡಿಸಲಾಗಿದೆ ಎಂದು ಎಸಿ ಡಾ. ಭೀಮಾಶಂಕರ ಗುಳೇಶ ಮಾಹಿತಿ ತಿಳಿಸಿದ್ದಾರೆ.

ಘಟನೆ ವಿವರ: ಕಳೆದ ಸೆಪ್ಟಂಬರನಲ್ಲಿ ಬೆಳಗಾವಿಯ ಕಿತ್ತೂರು ತಾಲೂಕಿನ ತಿಗಡೊಳ್ಳಿ ಗ್ರಾಮದಲ್ಲಿ ಹಳೆ ವೈಷಮ್ಯದ ಹಿನ್ನೆಲೆ ವ್ಯಕ್ತಿಯೊಬ್ಬರನ್ನು ಮಾರಕಾಸ್ತ್ರಗಳಿಂದ ಕೊಚ್ಚಿ ಕೊಲೆ ಮಾಡಿಲಾಗಿತ್ತು. ತಿಗಡೊಳ್ಳಿ ಗ್ರಾಮದ ವಿಜಯ್ ರಾಮಚಂದ್ರಪ್ಪ ಆರೇರ್ (35) ಕೊಲೆಯಾದ ವ್ಯಕ್ತಿ. ಅದೇ ಗ್ರಾಮದ ವ್ಯಕ್ತಿಯೊಬ್ಬರ ನಡುವೆ ನಿನ್ನೆ ರಾತ್ರಿ ಮಾತಿನ ಚಕಮಕಿ ನಡೆದು, ಪರಿಸ್ಥಿತಿ ವಿಕೋಪಕ್ಕೆ ತಿರುಗಿ ಇಬ್ಬರು ಮಾರಕಾಸ್ತ್ರಗಳಿಂದ ಹೊಡೆದಾಡಿಕೊಂಡಿದ್ದರು.

ತೀವ್ರ ಗಾಯಗೊಂಡಿದ್ದ ವಿಜಯ್‌ನನ್ನು ಬೆಳಗಾವಿ ಬಿಮ್ಸ್ ಆಸ್ಪತ್ರೆಗೆ ಕುಟುಂಬಸ್ಥರು ದಾಖಲಿಸಿದ್ದರು. ಚಿಕಿತ್ಸೆ ಫಲಿಸದೆ ಆಸ್ಪತ್ರೆಯಲ್ಲಿ ವಿಜಯ್ ಸಾವನ್ನಪ್ಪಿದ್ದನ್ನು. ಈ ಕುರಿತು ಕಿತ್ತೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಸದ್ಯ ಈ ಕೊಲೆ ಪ್ರಕರಣವೊಂದಕ್ಕೆ ಸಂಬಂಧಿಸಿದಂತೆ ಕಿತ್ತೂರು ಪೊಲೀಸ್ ಠಾಣೆ ಸಿಪಿಐ ಎಂ.ವಿ. ಹೊಸಪೇಟಿ ಅವರನ್ನು ಅಮಾನತುಗೊಳಿಸಲಾಗಿದೆ.

ಅಪ್ರೆಂಟಿಸ್ ಆಯ್ಕೆಗಾಗಿ ಅರ್ಜಿ ಆಹ್ವಾನ

ಬೆಳಗಾವಿ: ತಾಂತ್ರಿಕ ತರಬೇತಿ ಸಂಸ್ಥೆ ವತಿಯಿಂದ ಹಿಂದೂಸ್ಥಾನ್ ಏರೋನಾಟಿಕ್ಸ್ ಲಿಮಿಟೆಡ್ ಬೆಂಗಳೂರು ಮೂಲದ ಎಚ್ ಎ.ಎಲ್. ವಿಭಾಗಗಳಲ್ಲಿ ಲಭ್ಯವಿರುವ 600 ಸ್ಥಾನಗಳ ಪೈಕಿ ನಿಯೋಜಿತ ಟ್ರೇಡ್ ಗಳಲ್ಲಿ ಎಕ್ಸ್, ಐಟಿಐ ಅಭ್ಯರ್ಥಿಗಳಿಂದ (ಸಿಟಿಎಸ್ ಉತ್ತೀರ್ಣ ಅಭ್ಯರ್ಥಿಗಳು) ಅಪ್ರೆಂಟಿಷಿಪ್ ತರಬೇತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.ಅರ್ಹತೆ ಪಿಟ್ಟರ್, ಟರ್ನರ್, ಮೆಷಿನಿಸ್ಟ, ವೆಲ್ಡರ್, ಅಔಕಿಂ, ಪೌಂಡ್ರಿಮ್ಯಾನ್, ಶೀಟ್ ಮೆಟಲ್ ವರ್ಕರ್, ಕಾರ್ಪೆಂಟರ್, ಮೆಕ್ಯಾನಿಕ್ ಖ&ಂಅ, ಟೂಲ್ & ಡೈ ಮೇಕರ್ ಮತ್ತು ಅಡ್ವಾನ್ಸ್ಡ್ ಅಓಅ ಮಷಿನಿಂಗ್ ಟ್ರೇಡ್‌ಗಳಲ್ಲಿ ಕರ್ನಾಟಕ ರಾಜ್ಯದ ಮಾನ್ಯತೆ ಪಡೆದ ಐಟಿಐಗಳಿಂದ ಕ್ರಾಫ್ಟ್ಸ್‌ಮೆನ್ ಟ್ರೈನಿಂಗ್ ಸ್ಕೀಮ್ (CTS) ನಲ್ಲಿ ಉತ್ತೀರ್ಣರಾಗಿರಬೇಕು.ಷರತ್ತುಗಳು ಅರ್ಜಿಯ ನಮೂನೆಯು ಬೆಳಗಾವಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಲಭ್ಯವಿರುತ್ತದೆ, 10ನೇ ತರಗತಿಯ ಅಂಕಗಳಲ್ಲಿ ಶೇ.70ರಷ್ಟು ಹಾಗೂ ಸಿಟಿಎಸ್ (ಐಟಿಐ ಪರೀಕ್ಷೆಯಲ್ಲಿ) ಶೇ.30ರಷ್ಟು ಅಂಕಗಳ ಆಧಾರದ ಮೇಲೆ ಮೆರಿಟ್ ಲಿಸ್ಟ್ ಮೂಲಕ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುತ್ತದೆ, ಎಕ್ಸ್-ಐಟಿಐ ಅಭ್ಯರ್ಥಿಗಳು ಪೋರ್ಟಲ್ ತಿತಿತಿ.ಚಿಠಿಠಿಡಿಜಟಿಣಬಿಛಿಖಿಟಿಜುಚಿ.ಠಿಡಿರ/ಛಿಚಿಟಿಜುಜಚಿಣಜ-ಡಿಜಝಣಡಿಚಿಣುಠಟಿ ನಲ್ಲಿ ಹೆಸರು ನೋಂದಾಯಿಸಿಕೊಳ್ಳಬೇಕು ಮತ್ತು ಅರ್ಜಿಯಲ್ಲಿ ನೋಂದಣಿ ಸಂಖ್ಯೆಯನ್ನು ಸೂಚಿಸಬೇಕು, ಅಪೂರ್ಣ ಅರ್ಜಿಗಳನ್ನು ಯಾವುದೇ ಸಂದರ್ಭದಲ್ಲೂ ಆಯ್ಕೆಗೆ ಪರಿಗಣಿಸಲಾಗುವುದಿಲ್ಲ, ಅಪ್ರೆಂಟಿಷಿಪ್ ತರಬೇತಿ ಪಡೆದ ಅಥವಾ ಅಪ್ರೆಂಟಿಷಿಪ್ ತರಬೇತಿ ಪಡೆಯುತ್ತಿರುವ ಅಥವಾ 1 ವರ್ಷ ಅಥವಾ ಅದಕ್ಕಿಂತ ಹೆಚ್ಚಿನ ಕೆಲಸದ ಅನುಭವ ಹೊಂದಿರುವ ಅಭ್ಯರ್ಥಿಗಳು ಅರ್ಹರಲ್ಲ, ಆಯ್ಕೆಯಾದ ಅಭ್ಯರ್ಥಿಗಳಿಗೆ ಎಚ್‌ಎಎಲ್ ವೆಬ್‌ಸೈಟ್,ಎಸ್.ಎಂ.ಎಸ್. ಅಲರ್ಟ್,.ಇ-ಮೇಲ್,ಫೋನ್ ಕರೆ ಮೂಲಕ ತಿಳಿಸಲಾಗುತ್ತದೆ, ಡಿಸೆಂಬರ್ 27 2023 ರ ಒಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಉದ್ಯೋಗ ವಿನಿಮಯ ಕಛೇರಿಯ ಇನ್ನೀತರೆ ಯಾವುದೇ ಮಾಹಿತಿಗಳಿಗಾಗಿ ಕಛೇರಿಯ ಟೆಲಿಗ್ರಾಂ ಚಾನೆಲ್ "YES Kendra, Belagavi" (ಯೆಸ್ ಕೇಂದ್ರ, ಬೆಳಗಾವಿ) ನಲ್ಲಿ ಪಡೆಯಬಹುದಾಗಿದೆ.

ಕನ್ಯಾಭಾಗ್ಯ ಯೋಜನೆ ಜಾರಿ ಮಾಡುವಂತೆ ಡಿಸಿಗೆ ಅಹವಾಲು ಸಲ್ಲಿಸಿದ ರೈತ



ತುಮಕೂರು: ರೈತರ ಮಕ್ಕಳಿಗೆ ಹೆಣ್ಣು ಕೊಡುತ್ತಿಲ್ಲ, ಹಾಗಾಗಿ ಕನ್ಯಾಭಾಗ್ಯ ಯೋಜನೆ ಜಾರಿಗೆ ತಂದು ಮದುವೆ ಮಾಡಿಸಿ ಎಂದು ರೈತನೊಬ್ಬ ಜನತಾ ದರ್ಶನ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಗೆ ಅರ್ಜಿ ಸಲ್ಲಿಸಿದ್ದಾರೆ. ತುಮಕೂರು ಜಿಲ್ಲೆಯ ಶಿರಾ ನಗರದ ಮಿನಿ ವಿಧಾನಸೌಧ ಆವರಣದಲ್ಲಿ ಜನತಾ ದರ್ಶನ ನಡೆಯುತ್ತಿದ್ದು, ನೂತನ ಜಿಲ್ಲಾಧಿಕಾರಿ ಶುಭಕಲ್ಯಾಣ್ ಕಾರ್ಯಕ್ರಮದಲ್ಲಿ ಜನರ ಅಹವಾಲುಗಳನ್ನು ಸ್ವೀಕರಿಸುತ್ತಿದ್ದರು.

ಈ ವೇಳೆ ರೈತರ ಮಕ್ಕಳಿಗೆ ಹೆಣ್ಣು ಕೊಡ್ತಿಲ್ಲ, ದಯವಿಟ್ಟು ನಮ್ಮ ಮಕ್ಕಳಿಗೆ ಹೆಣ್ಣು ಕೊಡ್ಸಿ ಎಂದು ಬರೆದ ಅರ್ಜಿಯನ್ನ ಕೊಟ್ಟ ಶಿರಾ ತಾಲೂಕಿನ ಚಿಕ್ಕನಕೋಟೆ ಗ್ರಾಮದ ರೈತ ರಾಮಣ್ಣ ರೈತರು ದೇಶದ ಬೆನ್ನೆಲುಬು, ಅನ್ನ ಹಾಕುವ ದೇವರು ಎಂಬೆಲ್ಲ ಹೊಗಳಿಕೆ ನಮಗೆ ಬೇಡ, ಕನ್ಯಾಭಾಗ್ಯ ಯೋಜನೆ ಜಾರಿಗೊಳಿಸಿ ರೈತ ಮಕ್ಕಳನ್ನ ಮದುವೆ ಮಾಡಿಸಿ ಎಂದು ಮನವಿ ಸಲ್ಲಿಸಿದ್ದಾರೆ.

ವ್ಯಸನ ಮುಕ್ತ ಸಮಾಜ ನಿರ್ಮಾಣ ಮಾಡಿ: ಡಾ. ರವಿ ಪಾಟೀಲ್

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಮದ್ಯವರ್ಜನ ಶಿಬಿರ ಉದ್ಘಾಟನೆ

ಬೆಳಗಾವಿ ಹೊನಗಾ: ವ್ಯಸನ ಮುಕ್ತ ಜೀವನದಿಂದ ಮನುಷ್ಯನಿಗೆ ಸಮಾಜದಲ್ಲಿ ಹೆಚ್ಚಿನ ಗೌರವ ಸಿಗುತ್ತದೆ. ಮತ್ತು ಅವರು, ಮಾನಸಿಕ, ದೈಹಿಕ ಮತ್ತು ಆರ್ಥಿಕವಾಗಿ ಸುಧಾರಣೆಯಾಗಲು ಒಳ್ಳೆಯ ಅವಕಾಶ ಸಿಗುತ್ತದೆ ಎಂದು ವಿಜಯಾ ಅರ್ಥೋ ಮತ್ತು ಥರ್ಮೋ ಸಂಸ್ಥೆಯ ನಿರ್ದೇಶಕರಾದ ಡಾ. ರವಿ ಪಾಟೀಲ್ ರವರು ಹೇಳಿದರು.

ತಾಲ್ಲೂಕಿನ ಹೊನಗಾ ಗ್ರಾಮದ ಡಾ.ರವಿ ಪಾಟೀಲ್ ಆಯುರ್ವೇದಿಕ್ ಆಸ್ಪತ್ರೆ ಹಾಗೂ ಸಂಶೋಧನಾ ಕೇಂದ್ರ ಹೊನಗಾದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿಸಿ ಟ್ರಸ್ಟ್ ಬೆಳಗಾವಿ ಮತ್ತು ವಿವಿಧ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಲಾದ 1770 ನೇ ಮದ್ಯವರ್ಜನ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮದ್ಯ-ಮಾದಕಗಳಿಂದ ದೂರವಾದರೆ ಸಮಾಜದಲ್ಲಿ ಶಾಂತಿ ನೆಲೆಸಲಿದೆ. ನಿಮ್ಮೆಲ್ಲರ ಆರೋಗ್ಯದ ಹಿತದೃಷ್ಟಿಯಿಂದ ಮದ್ಯವರ್ಜನ ಶಿಬಿರ ಆಯೋಜಿಸಲಾಗಿದೆ. ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಜಿಲ್ಲಾ ನಿರ್ದೇಶಕರು ಆದ ಸತೀಶ ನಾಯ್ಕ್ ಅವರು ಮಾತನಾಡಿ, "ದೇಶದ ಆರ್ಥಿಕ ಪ್ರಗತಿಗೆ ವ್ಯಸನ ಮುಕ್ತ ಹಾಗೂ ಆರೋಗ್ಯಕರ ಸಮಾಜ ನಿರ್ಮಾಣ ವಾಗಬೇಕಿದೆ.

ಆ ನಿಟ್ಟಿನಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಹಮ್ಮಿಕೊಂಡಿರುವ ವಿವಿಧ ಯೋಜನಾ ಕಾರ್ಯಗಳು ನಿಜಕ್ಕೂ ಶ್ಲಾಘನೀಯ," ಎಂದು ಹೇಳಿದರು. ಜನಜಾಗೃತಿ ಸದಸ್ಯರಾದ ಎನ್ ಓ ಚೌಗಲೆ ರವರು ಉತ್ತಮ ಆರೋಗ್ಯಕ್ಕೆ ದುಷ್ಟಟ ನಿವಾರಣೆ ಅಗತ್ಯ ಎಂದು ತಿಳಿಸಿದರು.

ಶಿಬಿರದ ಯೋಜನಾಧಿಕಾರಿ ಭಾಸ್ಕರವರು ಕಾರ್ಯಕ್ರಮದ ಬಗ್ಗೆ ಪ್ರಾಸ್ತಾವಿಕವಾಗಿ ಮಾತನಾಡಿದರು, ಮದ್ಯವರ್ಜನ ಶಿಬಿರದ ಗೌರವಾಧ್ಯಕ್ಷ ಕಲ್ಲಗೌಡ ಪಾಟೀಲ್, ಸಮಿತಿಯ ಜಿಲ್ಲಾ ಅಧ್ಯಕ್ಷರಾದ ಬಸವರಾಜ ಸೊಪ್ಪಿಮಠ, ತಾಲೂಕಿನ ಯೋಜನಾಧಿಕಾರಿ ನಾಗರಾಜ ಹದ್ಲಿ, ಗೌಡಪ್ಪ ಶಿವನಗೌಡ ಪಾಟೀಲ, ಡಾ. ಚಿಂತಾಮನಿ ಕಡೋಲಿಕರ ಶಿಬಿರದ, ಅಖಿಲ ಕರ್ನಾಟಕ ಜನ ಜಾಗೃತಿ ವೇದಿಕೆ ಸದಸ್ಯರಾದ ಪ್ರಭಾಕರ ಕುಂದುರ, ಅಗಸಗಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಅಮೃತ ಮುದ್ಯಣ್ಣವರ, ರಾಜು ಬೆಲ್ಲದ ವಿನೋದ ಜಗಜಂಪಿ, ಮೇಲ್ವಿಚಾರಕ ನಾಗಪ್ಪಗೌಡ ಸಿಬಿರಾಧಿಕಾರಿಗಳು ನಾಗೇಂದ್ರ ಆರೋಗ್ಯ ಸಹಾಯಕಿ ಸೌಮ್ಯ, ಎಲ್ಲಾ ವಲಯದ ಮೇಲ್ವಿಚಾರಕರು,

ಬೆಳಗಾವಿ ಬಿ, ಹೊನಗಾ, ಕಡೋಲಿ ವಲಯದ ಸೇವಾ ಪ್ರತಿನಿದಿಗಳು, ಸಿ ಎಸ್ ಸಿ ಸಮನ್ವಧಿಕಾರಿ ಜಿತೇಂದ್ರ, ಕೃಷಿ ಮೇಲ್ವಿಚಾರ ಸತೀಶ ಗೌಡ, ಇತರರು ಇದ್ದರು. ತಾಲ್ಲೂಕಿನ ಯೋಜನಾಧಿಕಾರಿ ನಾಗರಾಜ ಹದ್ಲಿ ಸ್ವಾಗತಿಸಿದರು. ಮೇಲ್ವಿಚಾರಕಿ ವೈಶಾಲಿ ನಿರೂಪಿಸಿದರು. ಹೊನಗಾ ಮೇಲ್ವಿಚಾರಕ ಮಹಾಬಲೇಶ್ವರ ವಂದಿಸಿದರು.

ಎಲ್‌ಒಸಿಯಾದ್ಯಂತ ಲಾಂಚ್‌ಪ್ಯಾಡ್‌ಗಳಲ್ಲಿ 250ಕ್ಕೂ ಹೆಚ್ಚು ಭಯೋತ್ಪಾದಕರಿದ್ದಾರೆ: ಬಿಎಸ್‌ಎಫ್

ಶ್ರೀನಗರ: ಮತ್ತೊಮ್ಮೆ ಪಾಕಿಸ್ತಾನದಿಂದ ನುಸುಳುಕೋರರನ್ನು ದೊಡ್ಡ ಪ್ರಮಾಣದಲ್ಲಿ ಭಾರತಕ್ಕೆ ನುಗ್ಗಿಸುವ ಪ್ರಯತ್ನಗಳು ನಡೆಯುತ್ತಿವೆ.

ಗುಪ್ತಚರ ಪ್ರಕಾರ, ಪ್ರಸ್ತುತ ಭಾರತದ ಗಡಿಯೊಳಗೆ ನುಗ್ಗಲು 250ಕ್ಕೂ ಹೆಚ್ಚು ಭಯೋತ್ಪಾದಕರು ಪ್ರಯತ್ನಿಸುತ್ತಿದ್ದಾರೆ. ಗಡಿಯಾಚೆಗಿನ ಲಾಂಚಿಂಗ್ ಪ್ಯಾಡ್‌ಗಳಲ್ಲಿ 250ಕ್ಕೂ ಹೆಚ್ಚು ಉಗ್ರರು ನೆಲೆಸಿದ್ದು ನಮಗೆ ಗುಪ್ತಚರ ಮಾಹಿತಿ ಸಿಕ್ಕಿದೆ ಎಂದು ಸೇನೆ (ಗಡಿ ಭದ್ರತಾ ಪಡೆ) ಹೇಳಿದೆ. ನುಸುಳುಕೋರರು ಮತ್ತು ತರಬೇತಿ ಪಡೆಯುವವರನ್ನು ತಡೆಯಲು ನಾವು ಸಿದ್ಧರಿದ್ದೇವೆ ಎಂದು ಗಡಿ ಭದ್ರತಾ ಪಡೆಯ (ಬಿಎಸ್‌ಎಫ್) ಉನ್ನತ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಗಡಿ ನಿಯಂತ್ರಣ ರೇಖೆಯ (ಎಲ್‌ಒಸಿ) ಆಕ್ರಮಿತ ಕಾಶ್ಮೀರದಲ್ಲಿರುವ ಲಾಂಚ್ ಪ್ಯಾಡ್‌ಗಳಲ್ಲಿ ಸುಮಾರು 250 ರಿಂದ 300 ಭಯೋತ್ಪಾದಕ ಗಡಿ ದಾಟಲು ಕಾದುಕುಳಿತಿದ್ದಾರೆ. ಹೀಗಾಗಿ ಗಡಿಯಲ್ಲಿ ಹೆಚ್ಚಿನ ಭದ್ರತಾ ಪಡೆಗಳನ್ನು ನಿಯೋಜಿಸಲಾಗಿದೆ. ಗಡಿಯಾಚೆಯಿಂದ ಯಾವುದೇ ನುಸುಳುಕೋರರ ಯತ್ನವನ್ನು ವಿಫಲಗೊಳಿಸುತ್ತೇವೆ ಎಂದು ಅಧಿಕಾರಿ ತಿಳಿಸಿದ್ದಾರೆ.

ಉಗ್ರರ ವಿರುದ್ಧದ ಕಾರ್ಯಾಚರಣೆಗೆ ಜನರು ನಮ್ಮೊಂದಿಗೆ ಸಹಕರಿಸಿದರೆ, ನಾವು ಉತ್ತಮ ರೀತಿಯಲ್ಲಿ ಸೃಜನಶೀಲ ಬೆಳವಣಿಗೆಯನ್ನು ಮುಂದುವರಿಸಬಹುದು ಎಂದು ಹೇಳಿದರು.

ಸೈಬರ್ ಸೇಫ್ ಗರ್ಲ್ v6.0 ಪುಸ್ತಕ ಬಿಡುಗಡೆಗೊಳಿಸಿದ ಸಿಎಂ ಸಿದ್ದರಾಮಯ್ಯ

ಬೆಳಗಾವಿ: ಇಲ್ಲಿನ ಸುವರ್ಣಸೌಧ ಸಭಾಂಗಣದಲ್ಲಿ "ಸೈಬರ್ ಸೇಫ್ ಗರ್ಲ್ v6.0" ಪುಸ್ತಕವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಲೋಕಾರ್ಪಣೆಗೊಳಿಸಿದರು.

ಸಿಎಂ ಸಿದ್ದರಾಮಯ್ಯ, ಸ್ವೀಕರ್ ಯು.ಟಿ. ಖಾದರ್, ಸಚಿವರಾದ ಎಂ.ಸಿ. ಸುಧಾಕರ್, ಶಾಸಕರಾದ ಅಶೋಕ್ ಪಟ್ಟಣ್, ಗಣೇಶ್ ಹುಕ್ಕೇರಿ, ಅಭಯ ಪಾಟೀಲ, ವಿಟಿಯು ವಿಶೇಷ ಅಧಿಕಾರಿ ಚೈತ್ರಾ ಕೆ.ಎಂ, ಡಾ. ಅನಂತ ಪ್ರಭುಜೀ, ಡಾ. ಬುದ್ಧಚಂದ್ರಶೇಖರ ಅವರು ಪುಸ್ತಕ ಬಿಡುಗಡೆಗೆ ಮಾಡಿದರು.

ಈ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾತನಾಡಿ, ಡಿಜಿಟಲ್ ಸುರಕ್ಷಿತ ವಾತಾವರಣವನ್ನು ಬೆಳೆಸುವ ನಿಟ್ಟಿನಲ್ಲಿ ಸರ್ಕಾರ ಮತ್ತು ಮಧ್ಯಸ್ಥಗಾರರ ಬದ್ಧತೆಗೆ ಸಾಕ್ಷಿಯಾಗಿದೆ.

ಲಾಭಕ್ಕಾಗಿ ಮಾತ್ರ ತಂತ್ರಜ್ಞಾನವನ್ನು ಬಳಸಬೇಕಿದೆ. ಅಪರಾದ ತಡೆಗೆ "ಸೈಬರ್ ಸೇಫ್ ಗರ್ಲ್ v6.0" ಪುಸ್ತಕ ಅಗತ್ಯವಿದ್ದು, ಕೊಡುಗೆದಾರರ ಪ್ರಯತ್ನ ಕಾರ್ಯ ಶ್ಲಾಘಣೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ತಂತ್ರಜ್ಞಾನ ಏರಿಕೆಯಿಂದ ಬಹಳಷ್ಟು ಅನುಕೂಲ ಮತ್ತು ಅನಾನುಕೂಲಗಳು ನಡೆಯುತ್ತಿವೆ. ಸಾವಿರಾರು ಪ್ರಕರಣಗಳು ರಾಜ್ಯದಲ್ಲಿ ದಾಖಲಾಗಿವೆ. ಯುವಕರು ಭವಿಷ್ಯ ರೂಪಿಸಿಕೊಳ್ಳಲು ತಂತ್ರಜ್ಞಾನ ಬಹಳಷ್ಟು ಸಹಕಾರಿಯಾಗಿದೆ. ಆದರೆ, ತಂತ್ರಜ್ಞಾನವನ್ನು ದುರುಪಯೋಗ ಮಾಡಿಕೊಳ್ಳಲಾಗುತ್ತಿದೆ . ಇದರ, ಜಾಗೃತ ನಡೆಗೆ ಡಿಜಿಟಲ್ ಸಾಕ್ಷರತೆಯ ಮಧ್ಯಸ್ಥಿಕೆಯ ಅಗತ್ಯವಿದೆ ಎಂದು ಹೇಳಿದರು.

"ನಮ್ಮ ಯುವಕರಿಗೆ ಅಂತರ್ಜಾಲದ ಬಳಕೆಯ ಬಗ್ಗೆ ಶಿಕ್ಷಣ ನೀಡಬೇಕಿದೆ. ಹೊಸ ಪ್ರಯತ್ನದೊಂದಿಗೆ ಸೈಬರ್ ಸೇಫ್ ಗರ್ಲ್ ಪುಸ್ತಕ ಬಿಡುಗಡೆಯಾಗಿರುವುದು ಸಂತಸ. ಈ ಪುಸ್ತಕ ಸುರಕ್ಷಿತ ಡಿಜಿಟಲ್ ಭವಿಷ್ಯವನ್ನು ನಿರ್ಮಿಸಲು ಪ್ರಮುಖ ಪ್ರಾತ್ರ ವಹಿಲಿಸದೆ. ಇದು ಅಮೂಲ್ಯವಾದ ಪ್ರಯತ್ನದ ಎಂದು ಸ್ವೀಕರ್ ಯು.ಟಿ. ಖಾದರ್ ಮೆಚ್ಚುಗೆ ವ್ಯಕ್ತಪಡಿಸಿದರು.

"ಸೈಬರ್ ಸೇಫ್ ಗರ್ಲ್ v6.0" ನ ಕನ್ನಡ ಪುಸ್ತಕ ಗಣ್ಯರ ಸಮ್ಮುಖದಲ್ಲಿ ಅನಾವರಗೊಂಡಿದ್ದು, ಡಿಜಿಟಲ್ ಜಾಗೃತವು ಸಮಾಜವನ್ನು ರಕ್ಷಿಸುವ ಪ್ರಯತ್ನಗಳಲ್ಲಿ ಮಹತ್ವದ ಮೈಲಿಗಲ್ಲನ್ನು ಸಾಧಿಸಲಿದೆ. ಆನ್‌ಲೈನ್ ಜಗತ್ತನ್ನು ಜವಾಬ್ದಾರಿಯುತವಾಗಿ ಮತ್ತು ಸುರಕ್ಷಿತವಾಗಿ ಇಡಲು ಅಗತ್ಯವಿದೆ.

ಜ್ಞಾನವನ್ನು ಹೊಂದಿರುವ ವ್ಯಕ್ತಿಗಳನ್ನು ಸಬಲೀಕರಣಗೊಳಿಸಲು ಈ ಉಪಕ್ರಮವು ಸಿದ್ಧವಾಗಿದೆ. ಸ್ವೀಕರ್ ಯು.ಟಿ. ಖಾದರ್, ಸಚಿವರಾದ ಸತೀಶ ಜಾರಕಿಹೊಳಿ, ಎಂ.ಸಿ. ಸುಧಾಕರ್, ಲಕ್ಷ್ಮೀ ಹೆಬ್ಬಾಳಕರ್ ಅವರು ಸಹಾಯ, ಸಹಕಾರ ನೀಡಿದ್ದಾರೆ ಎಂದು ವಿಟಿಯು ವಿಶೇಷ ಅಧಿಕಾರಿ ಚೈತ್ರಾ ಕೆ.ಎಂ ತಿಳಿದರು.

ಈ